ಸಂಪುಟ : 10 ಸಂಚಿಕೆ: 301 ಪುಟ : 4+2 ಬೆಲೆ: 3.00 ಗುರುವಾರ ಜನವರಿ 15 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 301 Pages : 4+2 Price : 3.00 Thursday January 15 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಕರ ಸಂಕ್ರಾಂತಿ ಶುಭಾಶಯಗಳು

ಈ ಹಬ್ಬ ಎಲ್ಲರ ಬಾಳಲ್ಲಿ ಸಂತಸ, ಸಾಮರಸ್ಯ, ಸಮೃದ್ಧಿಯನ್ನು ತರಲಿ.



ಓದುಗರು, ಜಾಹೀರಾತುದಾರರು, ಪತ್ರಿಕಾ ವಿತರಕರಿಗೆ ಮಕರ ಸಂಕ್ರಾಂತಿ ಹಬ್ಬದ ಶುಭಾಶಯಗಳು.

### ದಿ. ಆರ್.ಬಿ. ಮಾಮಲೇದೇಸಾಯಿ ಅವರ ದತ್ತಿ ಸಂಸ್ಮರಣೆ, ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ದಿ. ಮಾಮಲೇದೇಸಾಯಿ ಇಂದಿನ ಪೀಳಿಗೆಗೆ ಆದರ್ಶ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹಂದಿಗನೂರ ದೇಶಗತಿ ಮನೆತನ ಉತ್ತರ ಕರ್ನಾಟಕದಲ್ಲಿ ತನ್ನದೇ ಆದ ಇತಿಹಾಸ ಹಾಗೂ ಪರಂಪರೆಯುಳ್ಳ ಮನೆತನವಾಗಿದೆ. ಆಗರ್ಭ ಶ್ರೀಮಂತ ಕುಟುಂಬದಲ್ಲಿ ಜನಿಸಿದ ದಿ. ಆರ್.ಬಿ. ಮಾಮಲೇದೇಸಾಯಿ ಯಾವುದೇ ಆಡಂಬರವಿಲ್ಲದ, ಸೌಜನ್ಯದ, ಮೌಲ್ಯಾಧಾರಿತ ಜೀವನ ನಡೆಸಿದ ವ್ಯಕ್ತಿಗಳಾಗಿದ್ದರು. ಅವರ ಜೀವನದ ಯಶೋಗಾಥೆ ಇಂದಿನ ಪೀಳಿಗೆಗೆ ಅನುಕರಣೀಯ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಆಯೋಜಿಸಲ್ಪಟ್ಟ ಹಾವೇರಿ ಜಿಲ್ಲೆಯ ಹಂದಿಗನೂರ ದೇಶಗತಿ ಮನೆತನದ ದಿ. ಆರ್.ಬಿ. ಮಾಮಲೇದೇಸಾಯಿ ಅವರ ದತ್ತಿ ಸಂಸ್ಮರಣೆ ಹಾಗೂ ಡಾ. ಮಲ್ಲಿಕಾರ್ಜುನ ಪಾಟೀಲ ಬರೆದ ಆರ್.ಬಿ. ಮಾಮಲೇದೇಸಾಯಿ ಜೀವನ ಸಾಧನೆ ಕೃತಿ ಲೋಕಾರ್ಪಣೆ ಮಾಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಇಂದು ಸರ್ಕಾರ ರೈತರ ಪ್ರಕರಣಗಳಿಗೆ ಸಂಬಂಧಿಸಿದಂತೆ ತ್ವರಿತವಾಗಿ ಪ್ರಕರಣಗಳು ಇತ್ಯರ್ಥವಾಗಲು ಸಿ.ಪಿ.ಸಿ ಕಾನೂನು ಮೂಲಕ ತಿದ್ದುಪಡಿ ತಂದಿದೆ. ದಿ. ಆರ್.ಬಿ. ಮಾಮಲೇದೇಸಾಯಿಯವರ ಜೀವನ ಸಾಧನೆ ಹಾಗೂ ಕೃಷಿ ಸಮಸ್ಯೆಗಳ ಪರಿಹಾರ ಕುರಿತು ದತ್ತಿ ಮೂಲಕ ಅವರ ಕುಟುಂಬದವರು ಪ್ರತಿ ವರ್ಷ ಮಾಡಲು ನಿರ್ಧರಿಸಿದ್ದು ಅಭಿನಂದನೀಯ ಎಂದರು.

ಮಾಜಿ ಶಾಸಕರಾದ ಅಮೃತ ದೇಸಾಯಿ ಮಾತನಾಡಿ, ದಿ. ಆರ್.ಬಿ. ಮಾಮಲೇದೇಸಾಯಿ ಅವರ 14 ಜನ ಮೊಮಕ್ಕಳಲ್ಲಿ ನಾನೂ ಒಬ್ಬ. ನಮ್ಮ ಅಜ್ಜನವರೇ ಸರಳ ಬದುಕಿನ ಪಾಠ ಹೇಳಿ ನಮಗೆಲ್ಲ ಸಂಸ್ಕಾರ ನೀಡಿದ್ದರೆಂದರು.

ಅಧ್ಯಕ್ಷತೆ ವಹಿಸಿದ್ದ ಎ.ಬಿ. ದೇಸಾಯಿ ಮಾತನಾಡಿ, ಕ್ಷೇತ್ರ ಯಾವುದಾದರೂ ಇರಲಿ, ಮೊದಲು ಅಲ್ಲಿ ಪ್ರಾಮಾಣಿಕತೆ, ಕರ್ತವ್ಯ ನಿಷ್ಠೆ ಮುಖ್ಯ. ದಿ. ಆರ್.ಬಿ. ಮಾಮಲೇದೇಸಾಯಿ ಅವರೊಬ್ಬ ತತ್ವನಿಷ್ಠ, ಕಾರ್ಯತತ್ಪರ, ನ್ಯಾಯ ನಿಷ್ಠುರಿಗಳಾಗಿದ್ದರು. ಸತ್ಯಶುದ್ಧ ಕಾಯಕ ಜೀವಿಗಳಾಗಿದ್ದರು ಎಂದು ಹೇಳಿದರು.

ಮಹೇಶ ಮಾಮಲೇದೇಸಾಯಿ ದತ್ತಿ ಆಶಯದ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಹಂದಿಗನೂರ ದೇಶಗತಿ ಅರವಿಂದ ಮಾಮಲೇದೇಸಾಯಿ, ಯಶೋಧಾಬಾಯಿ ದೇಸಾಯಿ, ಜಿ.ಕೆ. ವೆಂಕಟೇಶ, ಡಾ. ತೇಜಸ್ವಿ ಕಟ್ಟಿಮನಿ, ಶಂಕರ ಹಲಗತ್ತಿ, ಡಾ.

> ದಿ. ಆರ್.ಬಿ. ಮಾಮಲೇದೇಸಾಯಿಯವರ ಜೊತೆ ನನಗೆ ಭಾವನಾತ್ಮಕ ಸಂಬಂಧವಿತ್ತು. ಅವರು ರೈತರ ಬಗ್ಗೆ ಅಪಾರ ಕಳಕಳಿಯುಳ್ಳವರಾಗಿದ್ದರು. ಅಂದಿನ ಕೃಷಿ ಮಾರುಕಟ್ಟೆ ವ್ಯವಸ್ಥೆಯಲ್ಲಿ ರೈತರು ಮಧ್ಯವರ್ತಿಗಳ ಹಾವಳಿಯಿಂದಲ್ಲದೇ ವಿವಿಧ ರೀತಿಯಲ್ಲಿ ಶೋಷಣೆಗೆ ಒಳಪಡುವುದನ್ನು ನಿಯಂತ್ರಿಸಲು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾರಂಭಿಸಲು ಶ್ರಮವಹಿಸಿದ ಕೀರ್ತಿ ಆರ್.ಬಿ. ಮಾಮಲೇದೇಸಾಯಿ ಅವರಿಗೆ ಸಲ್ಲಬೇಕು ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.

ಮಲ್ಲಿಕಾರ್ಜುನ ಪಾಟೀಲ ಇದ್ದರು.

ಶಶಿಧರ ತೋಡಕರ ಸ್ವಾಗತಿಸಿದರು. ಬಸವಪ್ರಭು ಹೊಸಕೇರಿ ಪ್ರಾಸ್ತಾವಿಕವಾಗಿ ಮಾನತಾಡಿದರು. ಶಿವಾನಂದ ಭಾವಿಕಟ್ಟಿ ನಿರೂಪಿಸಿದರು. ಶಂಕರ ಕುಂಬಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸತೀಶ ತುರಮರಿ, ವೀರಣ್ಣ ಒಡ್ಡೀನ, ಗುರು ಹಿರೇಮಠ, ಸಿ.ಎಸ್. ಪಾಟೀಲ, ಡಾ. ಡಿ.ಎಂ. ಹಿರೇಮಠ, ನಾಗರಾಜ ಗುರಿಕಾರ, ಎನ್.ಆರ್. ಬಾಳಿಕಾಯಿ, ದಾನಪ್ಪ ಕಬ್ಬೇರ, ಬಿ.ಎಲ್. ಶಿವಳ್ಳಿ, ಶಂಕರ ಬೆಟಗೇರಿ, ಬಿ.ಎಸ್. ಶಿರೋಳ, ಡಾ. ಎಸ್.ಆರ್. ರಾಮನಗೌಡರ, ಡಾ. ಪಾರ್ವತಿ ಮತ್ತು ಸುರೇಶ ಹಾಲಭಾವಿ, ಬಿ.ಡಿ. ಹಿರೇಮಠ, ಪ್ರತಾಪ ಚವ್ಹಾಣ, ಎಸ್.ಜಿ. ಪಾಟೀಲ, ಚನಬಸಪ್ಪ ಮರದ, ಡಾ. ಲಿಂಗರಾಜ ಅಂಗಡಿ, ಎಂ.ಎಂ. ಚಿಕ್ಕಮಠ, ಬಸವರಾಜ ಕಪಲಿ, ಆಯ್.ಎಲ್. ಪಾಟೀಲ, ತೆಲಸಂಗ ಹಾಗೂ ಮಾಮಲೇದೇಸಾಯಿ ಕುಟುಂಬಸ್ಥರಾದ ದರ್ಶನ, ವಿಜಯ, ಉಮೇಶ, ಇಂದಿರಾ, ಶೀಲಾ, ಶ್ರೀನಿವಾಸ (ರಾಜು) ಕುಲಕರ್ಣಿ ಸೇರಿದಂತೆ ಮಾಮಲೇದೇಸಾಯಿ ಅಭಿಮಾನಿಗಳು ಮತ್ತು ಗಣ್ಯರು ಉಪಸ್ಥಿತರಿದ್ದರು.

## ಬೆಳೆ ಸಮೀಕ್ಷೆ ಕೈಗೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ ಬೆಳೆದಿರುವ ಬೆಳೆಗಳ ಸಮೀಕ್ಷೆಗಾಗಿ ಸರಕಾರ ಹಿಂಗಾರು ರೈತರ ಬೆಳೆ ಸಮೀಕ್ಷೆ–25 ಆ್ಯಪ್ ಬಿಡುಗಡೆ ಮಾಡಿದ್ದು, ಆರಂಭದಲ್ಲೆ ಸಮೀಕ್ಷೆಗೆ ರೈತರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಜನವರಿ 2ರಿಂದ 12ರವರೆಗೆ 1,08,508 ತಾಕುಗಳಲ್ಲಿ (ಶೇ. 31) ರೈತರು ಸಮೀಕ್ಷೆ ಕೈಗೊಂಡಿದ್ದಾರೆ.

2024–25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 3.16 ▸▸ 3ನೇ ಪುಟಕ್ಕೆ

### ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿಯಿಂದ 'ಉತ್ಕರ್ಷತೆಯೆಡೆಗೆ' ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರ

# ವಿದ್ಯಾರ್ಥಿಗಳು ಸ್ಥಿರತೆ, ಹೊಂದಾಣಿಕೆಯನ್ನು ಅಳವಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪರೀಕ್ಷಾ ಅವಧಿಯು ವಿದ್ಯಾರ್ಥಿಯ ಶೈಕ್ಷಣಿಕ ಪ್ರಯಾಣದಲ್ಲಿ ನಿರ್ಣಾಯಕ ಹಂತವಾಗಿದೆ. ವಿದ್ಯಾರ್ಥಿಗಳು ಒತ್ತಡ ಮುಕ್ತರಾಗಿ ಪರೀಕ್ಷೆಗೆ ಸಜ್ಜಾಗಲು ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿ ಸಹಕಾರಿಯಾಗಲಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಹೇಳಿದರು.

ತಾಲೂಕಿನ ಹುಲಕೋಟಿಯ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿ ವತಿಯಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ 'ಉತ್ಕರ್ಷತೆಯೆಡೆಗೆ' ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿಯು ನಿರ್ಣಾಯಕ ಶೈಕ್ಷಣಿಕ ಅವಧಿಯಲ್ಲಿ ಕಲಿಯುವವರನ್ನು




ಬೆಂಬಲಿಸುತ್ತಿದೆ. ವಿದ್ಯಾರ್ಥಿಗಳು ಶಾಲಾ ತರಗತಿಗಳಲ್ಲಿ ಶೈಕ್ಷಣಿಕವಾಗಿ ಸಿದ್ಧರಾಗಿದ್ದರೂ ವೈಫಲ್ಯದ ಭಯ, ಇತರರೊಂದಿಗೆ ಹೋಲಿಕೆ ಮತ್ತು ನಿರೀಕ್ಷೆಗಳ ಬಗೆಗಿನ ಆತಂಕದಿಂದ ಒತ್ತಡದಲ್ಲಿರುತ್ತಾರೆ. ಆದ್ದರಿಂದ ವಿದ್ಯಾರ್ಥಿಗಳು ಆತ್ಮವಿಶ್ವಾಸ, ಪ್ರೇರಣೆ ಮತ್ತು ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಉದ್ದೇಶದಿಂದ ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಯೋಗಕ್ಷೇಮವು ಪ್ರತ್ಯೇಕವಾಗಿ ಪರಿಹರಿಸಬೇಕಾದ ವೈಯಕ್ತಿಕ ಕಾಳಜಿಯಲ್ಲ. ಪರೀಕ್ಷೆಯ ಸಮಯದಲ್ಲಿ ಮಗುವಿನ ಭಾವನಾತ್ಮಕ ಅನುಭವವು ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರ ಸಂಯೋಜಿತ ಪ್ರಭಾವದಿಂದ ರೂಪುಗೊಳ್ಳುತ್ತದೆ. ಈ ಹಂತದಲ್ಲಿ, ವಿಶೇಷವಾಗಿ ವಿದ್ಯಾರ್ಥಿಗಳು ಸ್ಥಿರತೆ, ತಿಳುವಳಿಕೆ ಮತ್ತು ಹೊಂದಾಣಿಕೆಯನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಪರೀಕ್ಷೆಗೆ ಸಂಬಂಧಿಸಿದ ಒತ್ತಡ ಮತ್ತು ಭಾವನಾತ್ಮಕ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸುವುದು, ಭಯ, ಆತಂಕ ಮತ್ತು ಸ್ವಯಂ–ಅನುಮಾನವನ್ನು ನಿರ್ವಹಿಸಲು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಸಾಧನಗಳನ್ನು ಅಭಿವೃದ್ಧಿಪಡಿಸಲು, ದೈನಂದಿನ ಸಂವಹನವು ಒತ್ತಡವನ್ನು ಹೇಗೆ ಕಡಿಮೆ ಮಾಡುತ್ತದೆ ಅಥವಾ ತೀವ್ರಗೊಳಿಸುತ್ತದೆ ಎಂಬುದನ್ನು ಗುರುತಿಸಲು ಪೋಷಕರು ಮತ್ತು ಶಿಕ್ಷಕರಿಗೆ ಅನುವು ಮಾಡಿಕೊಡುವುದು ಹಾಗೂ ವಿದ್ಯಾರ್ಥಿಗಳು ಮನೆ ಮತ್ತು ಶಾಲೆಗಳಲ್ಲಿ ಸ್ಥಿರತೆ ಮತ್ತು ಭರವಸೆಯನ್ನು ಅನುಭವಿಸುವಂತೆ ಭಾವನಾತ್ಮಕ ಜೋಡಣೆಯನ್ನು ನಿರ್ಮಿಸುವಲ್ಲಿ ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿ ಸಹಕಾರಿಯಾಗಲಿದೆ ಎಂದು ಹೇಳಿದರು.

ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ತಾ.ಪಂ ಮಾಜಿ ಅಧ್ಯಕ್ಷ ಮೋಹನ ದುರಗಣ್ಣವರ, ಮುಖಂಡರಾದ ಚಂದ್ರಪ್ಪ ಕರಿಕಟ್ಟಿ, ಡಾ. ವೇಮನ ಸಾವಕಾರ, ಸಚಿನ್ ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಹುಲಕೋಟಿ ಗ್ರಾ.ಪಂ ಸರ್ವ ಸದಸ್ಯರು ಹಾಜರಿದ್ದರು.

> ವಿದ್ಯಾರ್ಥಿಗಳು ಶಾಂತತೆ ಮತ್ತು ಸ್ಪಷ್ಟತೆಯೊಂದಿಗೆ ಪರೀಕ್ಷೆಗಳನ್ನು ಎದುರಿಸಿದಾಗ ಉತ್ತಮ ಫಲಿತಾಂಶ ಹೊಂದಬಹುದು. ಈ ಹಿನ್ನೆಲೆಯಲ್ಲಿ ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿಯು 'ಉತ್ಕರ್ಷತೆಯೆಡೆಗೆ' ವಿದ್ಯಾರ್ಥಿ ಸ್ನೇಹಿ ಕಾರ್ಯಾಗಾರ ಆಯೋಜಿಸುವ ಮೂಲಕ ವಿದ್ಯಾರ್ಥಿಗಳಲ್ಲಿನ ಪರೀಕ್ಷೆಯ ಭಯವನ್ನು ನಿವಾರಿಸುವ ಪ್ರಯತ್ನ ಮಾಡುತ್ತಿದೆ.
>
> **– ಕೃಷ್ಣಗೌಡ ಎಚ್. ಪಾಟೀಲ.**
> ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರು.

## ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯು ಮಕ್ಕಳನ್ನು ದೈಹಿಕವಾಗಿ, ನೈತಿಕವಾಗಿ, ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಶೋಷಣೆಗೆ ಒಳಪಡಿಸಿ ಅವರ ಶಿಕ್ಷಣ ಅವಕಾಶಗಳನ್ನು ತಡೆಗಟ್ಟುತ್ತದೆ. ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡುವುದು ಜರೂರಾದ ಅವಶ್ಯಕತೆಯಾಗಿರುತ್ತದೆ. ಈ ಪದ್ಧತಿಯು ದೇಶದ ಮುಂದಿರುವ ಕಠಿಣ ಸವಾಲಾಗಿದ್ದು, ಅನಕ್ಷರತೆ ಹಾಗೂ ಬಡತನಕ್ಕೆ ಹೊಂದಿಕೊಂಡಿರುತ್ತದೆ. ಆದುದರಿಂದ ಸಮಾಜದ ಸಂಘಟಿತ ಪ್ರಯತ್ನ ಹಾಗೂ ಹೋರಾಟದಿಂದ ಮಾತ್ರ ಈ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ಎದುರಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಕರ್ನಾಟಕವನ್ನು ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ಮುಕ್ತ ರಾಜ್ಯವನ್ನಾಗಿಸುವ ಉದ್ದೇಶವನ್ನು ಹೊಂದಲಾಗಿದೆ.

ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ನಿಯಮಗಳು, 2017 (ಕೇಂದ್ರ/ರಾಜ್ಯ), ಎಸ್.ಓ.ಪಿ (ಕೇಂದ್ರ / ರಾಜ್ಯ) 2017 ಗಳ ಅನುಷ್ಠಾನ, ಬಾಲ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ, ರಕ್ಷಣೆ, ಪುನರ್ವಸತಿ, ಶೈಕ್ಷಣಿಕ ಕಿಟ್ ನೀಡುವುದು ಹಾಗೂ ಗ್ರಾಮ/ತಾಲೂಕು/ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರಲ್ಲಿ ಜನ ಜಾಗೃತಿ ಮಾಹಿತಿ, ಶಿಕ್ಷಣ ಹಾಗೂ ಸಂವಹನ (ಐಇಸಿ) ಚಟುವಟಿಕೆಗಳನ್ನು ಆಯೋಜಿಸುವುದು ಹಾಗೂ ತರಬೇತಿ, ಜನಜಾಗೃತಿ ಕಾರ್ಯಕ್ರಮಗಳು, ಇತರೆ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಮತ್ತು ಕರ್ನಾಟಕವನ್ನು ಬಾಲ ಹಾಗೂ ಕಿಶೋರ ಕಾರ್ಮಿಕ ಮುಕ್ತ ರಾಜ್ಯವನ್ನಾಗಿಸಲು ರಾಜ್ಯ ಸರ್ಕಾರವು ಜಾರಿಗೆ ತಂದಿರುವ ರಾಜ್ಯ ಬಾಲಕಾರ್ಮಿಕ ಪುನರ್ವಸತಿ ಯೋಜನೆ ಅನುಷ್ಠಾನ ಹಾಗೂ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸಲು ಹಾಗೂ ಪುನರ್ವಸತಿಗೊಳಿಸುವುದರ ಮೂಲಕ ಅವರ ಬದುಕಿಗೆ ಆಶ್ರಯ ಕಲ್ಪಿಸಿ ಮುಖ್ಯವಾಹಿನಿಗೆ ತರುವ ಈ ಸಮಾಜಮುಖಿ ಕಾರ್ಯಕ್ಕೆ ಅಗತ್ಯವಿರುವ ▸▸ 3ನೇ ಪುಟಕ್ಕೆ

## ಸಾಮೂಹಿಕ ವಿವಾಹ ಮಹೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಹೂವಿನಶಿಗ್ಲಿ ಮಠದ 47ನೇ ಜಾತ್ರಾ ಮಹೋತ್ಸವ ಹಾಗೂ ಲಿಂ. ನಿರಂಜನ ಮಹಾಸ್ವಾಮಿಗಳ 16ನೇ ಪುಣ್ಯ ಸ್ಮರಣೋತ್ಸವ ಅಂಗವಾಗಿ ಜ.15ರಂದು ಮಧ್ಯಾಹ್ನ 12ಕ್ಕೆ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ ಸವಣೂರು ದೊಡ್ಡಹುಣಸೇ ಕಲ್ಮಠದ ಶ್ರೀ ಚನ್ನಬಸವ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ನೆರವೇರಲಿದೆ.



ಅಧ್ಯಕ್ಷತೆಯನ್ನು ಮಠದ ಪಟ್ಟಾಧ್ಯಕ್ಷರಾದ ಶ್ರೀ ಚನ್ನವೀರ ಸ್ವಾಮೀಜಿ, ನೇತೃತ್ವವನ್ನು ಮುಂಡಗೋಡದ ರುದ್ರಮುನಿ ಸ್ವಾಮಿಗಳು ವಹಿಸಲಿದ್ದಾರೆ. ಲಕ್ಷ್ಮೇಶ್ವರದಲ್ಲಿ ಶ್ರೀಮಠದಿಂದ ಪ್ರಾರಂಭಗೊಳ್ಳುತ್ತಿರುವ ಧಾರ್ಮಿಕ ಪಾಠಶಾಲೆ ಕಟ್ಟಡದ ದಾನಿಗಳಾದ ಬಸವರಾಜ ಗಾಂಜಿ, ಪುಲಕೇಶಿ ಉಪನಾಳ ಅವರಿಗೆ ಶ್ರೀರಕ್ಷೆ ಮಾಡಲಾಗುವುದು. ಗಣ್ಯ ವರ್ತಕರಾದ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಬಸವೇಶ ಮಹಾಂತೆಟ್ಟರ, ಮಂಜುನಾಥ ಮಾಗಡಿ ಅತಿಥಿಗಳಾಗಿ ಆಗಮಿಸುವರು.

ಸಂಜೆ 3ಕ್ಕೆ ತುಲಾಭಾರ, 4ಕ್ಕೆ ಮಲ್ಲಕಂಬ ಪ್ರದರ್ಶನ, ಸಂಜೆ 5ಕ್ಕೆ ಕಡುಬಿನೋತ್ಸವ, ಸಂಜೆ 6ಕ್ಕೆ ಶಿರಹಟ್ಟಿ, ಫಕ್ಕೀರೇಶ್ವರ ಸಂಸ್ಥಾನಮಠದ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ 'ಮಹಾತ್ಮರ ಬದುಕು ಬೆಳಕು' ಚಿಂತನ ಗೋಷ್ಠಿ ನಡೆಯಲಿದೆ. ಹಿರೇಮಾಗಡಿಯ ಶಿವಮೂರ್ತಿ ಮುರುಘರಾಜೇಂದ್ರ ಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಕುಂದಗೋಳದ ಬಸವಣ್ಣಜ್ಜನವರು ನೇತೃತ್ವ, ರಾಚೋಟೇಶ್ವರ ದೇವರು ಸಮ್ಮುಖ ವಹಿಸುವರು.

ಶ್ರೀಮಠದ ತ್ರಿವಿಧ ದಾಸೋಹ ಸೇವೆಗೆ ಭಕ್ತಿಕಾಣಿಕೆ ಸಮರ್ಪಿಸಿದ ಸೋನಾಳದ ಲೊಕೇಶ ಹಣಮಶೆಟ್ಟಿ, ಲಕ್ಷ್ಮೇಶ್ವರದ ದೇವೇಂದ್ರಪ್ಪ ಬಳಿಗಾರ ಅವರಿಗೆ ಗೌರವಾರ್ಪಣೆ ಮಾಡಲಾಗುವುದು. ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ವಿ.ಪ ಸದಸ್ಯರಾದ ಪ್ರದೀಪ ಶೆಟ್ಟರ, ಎಸ್.ವಿ. ಸಂಕನೂರ, ಶಾಸಕ ಡಾ. ಚಂದ್ರು ಲಮಾಣಿ ಸೇರಿ ಮಾಜಿ ಶಾಸಕರು, ಗಣ್ಯಮಾನ್ಯರು ಉಪಸ್ಥಿತರಿರುವರು. ಕೊತಬಾಳದ ಕಲಾವಿದರಿಂದ ಸಾಂಸ್ಕೃತಿಕ ಕಾಯಕ್ರಮ ನಡೆಯಲಿದೆ ಎಂದು ಶ್ರೀಮಠದ ಪಟ್ಟಾಧ್ಯಕ್ಷರಾದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮತ್ತು ಭಕ್ತ ಮಂಡಳಿ ಪ್ರಕಟಣೆ ತಿಳಿಸಿದೆ.

## ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ಎಚ್.ವೈ. ಸಂದಕದ, ರವಿ ಗುಂಜೀಕರ್, ವಿದ್ಯಾಧರ ದೊಡ್ಡಮನಿ, ಚಿನ್ನಪ್ಪ ವಡ್ಡಟ್ಟಿ, ವೆಂಕಟೇಶ ಗೆಜ್ಜಿ, ಆಂಜನೇಯ ಕಟಗಿ, ನಾಗರಡ್ಡಿ ನಿಡಗುಂದಿ, ಸಹದೇವ ಕೋಟಿ, ರಾಘವೇಂದ್ರ ವಿ.ಎಸ್, ತಿಮ್ಮಣ್ಣ ಡೋಣಿ, ವಿಜಯ ಗಿಂಜಿ, ರವಿ ಕೋಟಿ ಸೇರಿದಂತೆ ಗಣ್ಯರು, ಹಿರಿಯರು ಇದ್ದರು.



## ರೋಣದಲ್ಲಿ ಕಬಡ್ಡಿ ವೈಭವ
## ನಿರೀಕ್ಷೆ ಮೀರಿ ಸೇರಿದ ಕ್ರೀಡಾ ಪ್ರೇಮಿಗಳು




**■ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಾ ಗ್ಯಾರಂಟಿ ಸಮಿತಿ ಅದ್ಯಕ್ಷ ಸಂಗನಗೌಡ (ಮಿಥುನ್) ಪಾಟೀಲರ ಜನ್ಮದಿನದ ನಿಮಿತ್ತ ಏರ್ಪಡಿಸಿದ್ದ ಪ್ರೋ ಕಬಡ್ಡಿ ವೀಕ್ಷಿಸಲು ನಿರೀಕ್ಷೆಗೂ ಮೀರಿ ಕ್ರೀಡಾಪ್ರೇಮಿಗಳು ಪಾಲ್ಗೊಂಡಿದ್ದರು.

ಕಬಡ್ಡಿ ವೈಭವ ವೀಕ್ಷಿಸಲು ಅನುವಾಗುವಂತೆ 4 ಸಾವಿರ ಜನ ಕುಳಿತು ಪಂದ್ಯಗಳನ್ನು ಆಸ್ವಾದಿಸುವಂತೆ ಗ್ಯಾಲರಿಯನ್ನು ನಿರ್ಮಿಸಲಾಗಿತ್ತು. ಆದರೆ, ಜ 13, ಕೊನೆಯ ದಿನ ನಿರೀಕ್ಷೆ ಮೀರಿ ಕ್ರೀಡಾ ಪ್ರೇಮಿಗಳು ಆಗಮಿಸಿದ್ದರಿಂದ ಸಂಘಟಕರು ಜನ ಸಾಗರವನ್ನು ನಿಯಂತ್ರಿಸಲು ಹರಸಾಹಸಪಡಬೇಕಾಯಿತು.

ಕಬಡ್ಡಿ ಫೈನಲ್ ಪಂದ್ಯದ ನಿಮಿತ್ತ ಮಹಿಳೆಯರ ಕಬಡ್ಡಿ ಪಂದ್ಯಾವಳಿಗಳನ್ನು ವೀಕ್ಷಿಸಲು ಅಂದಾಜು 2 ಸಾವಿರಕ್ಕೂ ಹೆಚ್ಚು ಮಹಿಳೆಯರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ವ್ಂಹಿಳೆಂು್ಂರ್ ಪಾಲ್ಗೊಳ್ಳುವಿಕೆ ಹೆಚ್ಚಾದಂತೆ ಪೊಲೀಸ್ ಭದ್ರತೆಯನ್ನೂ ಹೆಚ್ಚಿಸಲಾಯಿತು.

ಶಾಸಕ ಜಿ.ಎಸ್. ಪಾಟೀಲ ಕೂಡ ಕಳೆದ ನಾಲ್ಕು ದಿನಗಳಿಂದ ಮಗನ ಜನ್ಮದಿನದ ನಿಮಿತ್ತ ನಡೆದ ಕಾರ್ಯಕ್ರಮಗಳಿಗೆ ಆಗಮಿಸಿರಲಿಲ್ಲ. ಕೊನೆಯ ದಿನ ರಾತ್ರಿ ಕಬಡ್ಡಿ ಪಂದ್ಯಗಳನ್ನು ವೀಕ್ಷಿಸಲು ಶಾಸಕರು ಆಗಮಿಸಿದ್ದು ಕಬಡ್ಡಿ ಪಂದ್ಯಾವಳಿಗಳಿಗೆ ಮತ್ತಷ್ಟು ಮೆರುಗು ನೀಡಿತ್ತು.

## ಎಲ್‌ಡಿಎಫ್‌ನ 'ಕೇರಳಂ' ಮರುನಾಮಕರಣ ಕ್ರಮ ಬೆಂಬಲಿಸಿದ ರಾಜ್ಯ ಬಿಜೆಪಿ; ಪ್ರಧಾನಿ ಮೋದಿ ಮಧ್ಯಸ್ಥಿಕೆಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಕೇರಳ

ಭಾರತೀಯ ಜನತಾ ಪಕ್ಷದ (ಬಿಜೆಪಿ) ಕೇರಳ ಘಟಕವು, ಎಡ ಪ್ರಜಾಸತ್ತಾತ್ಮಕ ರಂಗ (ಎಲ್‌ಡಿಎಫ್) ಸರ್ಕಾರದ 'ಕೇರಳಂ' ಮರುನಾಕರಣ ಪ್ರಸ್ತಾವನೆಯನ್ನು ಬೆಂಬಲಿಸಿದೆ. ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಮಧ್ಯಸ್ಥಿಕೆ ವಹಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿಯವರಲ್ಲಿ ಮನವಿ ಮಾಡಿದೆ.

ಬಿಜೆಪಿ ರಾಜ್ಯ ಅಧ್ಯಕ್ಷ ರಾಜೀವ್ ಚಂದ್ರಶೇಖರ್ ಅವರು, ಪ್ರಧಾನಿ ಮತ್ತು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರಿಗೆ ಪ್ರತ್ಯೇಕ ಪತ್ರಗಳನ್ನು ಬರೆದಿದ್ದು, ಕೇರಳ ವಿಧಾನಸಭೆಯಲ್ಲಿ ಒಬ್ಬೇಒಬ್ಬ ಸದಸ್ಯರಿಲ್ಲದಿದ್ದರೂ ಪಕ್ಷವು ಈ ಕ್ರಮವನ್ನು ಬೆಂಬಲಿಸುತ್ತದೆ ಎಂದು ಸ್ಪಷ್ಟಪಡಿಸಿದೆ.

ಪ್ರಧಾನಿಗೆ ಬರೆದ ಪತ್ರದಲ್ಲಿ, ಚಂದ್ರಶೇಖರ್ ಅವರು ರಾಜ್ಯ ವಿಧಾನಸಭೆಯು ಅಧಿಕೃತ ದಾಖಲೆಗಳಲ್ಲಿ ಕೇರಳದಿಂದ ಕೇರಳಂ ಎಂದು ಹೆಸರನ್ನು ಬದಲಾಯಿಸಲು ಈಗಾಗಲೇ ನಿರ್ಣಯವನ್ನು ಅಂಗೀಕರಿಸಿದೆ ಎಂದು ಹೇಳಿದರು. ಬಿಜೆಪಿಯ ಸಿದ್ಧಾಂತವು ಭಾಷೆ, ಸಂಸ್ಕೃತಿ ಮತ್ತು ಸಂಪ್ರದಾಯವನ್ನು ರಕ್ಷಿಸುವುದರ ಮೇಲೆ ಕೇಂದ್ರೀಕರಿಸುತ್ತದೆ, ಕೇರಳವನ್ನು ಸಾವಿರಾರು ವರ್ಷಗಳ ಇತಿಹಾಸದಲ್ಲಿ ಬೇರೂರಿರುವ ಹೆಸರು ಎಂದು ಬಣ್ಣಿಸಿದ್ದಾರೆ.

"ನಮ್ಮ ಪಕ್ಷವು ಯಾವಾಗಲೂ ರಾಜ್ಯವನ್ನು ಕೇರಳಂ ಎಂದು ನೋಡಿದೆ, ಇದು ಮಲಯಾಳಂ ಮಾತನಾಡುವ ಜನರ ಆಳವಾದ ಸಾಂಸ್ಕೃತಿಕ ಮತ್ತು ಭಾಷಾ ಪರಂಪರೆಯನ್ನು ಪ್ರತಿಬಿಂಬಿಸುವ ಹೆಸರು" ಎಂದು ಅವರು ಬರೆದಿದ್ದಾರೆ.

"ತನ್ನ ಇತಿಹಾಸದಲ್ಲಿ ಆಳವಾಗಿ ಬೇರೂರಿರುವ, ಎಲ್ಲ ಮಲಯಾಳಿಗಳಿಗೆ ಉಜ್ವಲ ಮತ್ತು ಸಮೃದ್ಧ ಭವಿಷ್ಯಕ್ಕಾಗಿ ಕೆಲಸ ಮಾಡುವ ಕೇರಳವು ಧಾರ್ಮಿಕ ಆಧಾರದ ಮೇಲೆ ಪ್ರತ್ಯೇಕ ಜಿಲ್ಲೆಗಳ ಬೇಡಿಕೆಗಳನ್ನು ಎತ್ತುವ ಮೂಲಕ ರಾಜ್ಯವನ್ನು ವಿಭಜಿಸಲು ಯತ್ನಿಸುತ್ತಿರುವವ ದುರುದ್ದೇಶವನ್ನು ಮಂದಗೊಳಿಸುತ್ತದೆ" ಎಂದು ಅವರು ಹೇಳಿದರು.

## ಹಿಂದಿ ಶೈಕ್ಷಣಿಕ ಪದ್ಧತಿ ಹೇರಿಕೆಯಿಂದ ಉತ್ತರದ ಜನರಿಂದ ದಕ್ಷಿಣಕ್ಕೆ ವಲಸೆ: ಮಾರನ್



■ವಿಜಯಸಾಕ್ಷಿ ಸುದ್ದಿ, ಚೆನ್ನೈ

ಇಂಗ್ಲಿಷ್ ಶಿಕ್ಷಣವನ್ನು ನಿರುತ್ಸಾಹಗೊಳಿಸುತ್ತಾ, ವಿದ್ಯಾರ್ಥಿಗಳು ಹಿಂದಿ ಮಾತ್ರ ಕಲಿಯಲು ಪ್ರೋತ್ಸಾಹಿಸುತ್ತಿದ್ದಾರೆ. ಉತ್ತರ ರಾಜ್ಯಗಳ ಈ ನೀತಿಗಳಿಂದ ಉದ್ಯೋಗ ಸಿಗದೆ ದಕ್ಷಿಣದ ರಾಜ್ಯಗಳಿಗೆ ವಲಸೆ ಬರುತ್ತಿದ್ದಾರೆ ಎಂದು ಡಿಎಂಕೆ ಸಂಸದ ದಯಾನಿಧಿ ಮಾರನ್ ಉತ್ತರ ಭಾರತದ ರಾಜ್ಯಗಳನ್ನು ತೀವ್ರವಾಗಿ ಟೀಕಿಸಿದ್ದಾರೆ.

ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಮಾರನ್, ಉತ್ತರದ ಕೆಲವು ರಾಜ್ಯಗಳಲ್ಲಿ ವಿದ್ಯಾರ್ಥಿಗಳು ಶಿಕ್ಷಣವನ್ನು ಮುಂದುವರಿಸುವುದನ್ನು ತಡೆಯಲಾಗುತ್ತದೆ. ಹಿಂದಿಯ ಮೇಲೆ ಮಾತ್ರ ಗಮನಹರಿಸಲು ಹೇಳಲಾಗುತ್ತದೆ ಎಂದು ಆರೋಪಿಸಿದರು.

"ನಿಮ್ಮನ್ನು ಇಂಗ್ಲಿಷ್ ಕಲಿಯಬೇಡಿ ಎಂದು ಒತ್ತಾಯಿಸಲಾಗುತ್ತಿದೆ. ಆ ಮೂಲಕ ನಿಮ್ಮನ್ನು ಗುಲಾಮರನ್ನಾಗಿ ಇರಿಸಲಾಗುತ್ತದೆ" ಎಂದು ಅವರು ಹೇಳಿದರು. ಉತ್ತರ ರಾಜ್ಯಗಳಿಂದ ದಕ್ಷಿಣಕ್ಕೆ ಜನರ ವಲಸೆಗೆ ಮಾರನ್ ಈ ಶೈಕ್ಷಣಿಕ ಪದ್ಧತಿಗಳೇ ಕಾರಣ ಎಂದು ಹೇಳಿದರು. ತಮಿಳುನಾಡು ಶಿಕ್ಷಣದ ಮೇಲೆ ಒತ್ತು ನೀಡುವುದರಿಂದ ಅದರ ಆರ್ಥಿಕ ಬೆಳವಣಿಗೆಗೆ ಕಾರಣ ಎಂದು ವಾದಿಸಿದರು.

"ಇಂದು, ಎಲ್ಲ ಉನ್ನತ ಜಾಗತಿಕ ಕಂಪನಿಗಳು ವಿದ್ಯಾವಂತ ಜನರ ಕಾರಣದಿಂದಾಗಿ ತಮಿಳುನಾಡಿಗೆ ಬರುತ್ತಿವೆ" ಎಂದು ಅವರು ಹೇಳಿದರು.

ಹಿಂದಿಗೆ ಮಾತ್ರ ಶಿಕ್ಷಣವನ್ನು ಸೀಮಿತಗೊಳಿಸುವುದು ಇತರ ಪ್ರದೇಶಗಳಲ್ಲಿ ನಿರುದ್ಯೋಗಕ್ಕೆ ಕಾರಣವಾಗುತ್ತದೆ. ಆದರೆ, ತಮಿಳುನಾಡಿನ ದ್ರಾವಿಡ ಮಾದರಿಯು ಹುಡುಗಿಯರು ಮತ್ತು ಹುಡುಗರಿಬ್ಬರಿಗೂ ಶಿಕ್ಷಣಕ್ಕೆ ಸಮಾನ ಪ್ರವೇಶವನ್ನು ಉತ್ತೇಜಿಸುತ್ತದೆ" ಎಂದರು. ಇದು ಹೆಚ್ಚಿನ ಸಾಕ್ಷರತೆ ಮಟ್ಟ ಮತ್ತು ರಾಜ್ಯದಲ್ಲಿ ಮಹಿಳೆಯರಲ್ಲಿ ಹೆಚ್ಚಿನ ಭಾಗವಹಿಸುವಿಕೆಗೆ ಕಾರಣವಾಗಿದೆ ಎಂದು ಅವರು ಹೇಳಿದರು.

### ಮಕರ ಸಂಕ್ರಮಣ ಆಚರಣೆಯ ನಿಮಿತ್ತ ವಿಶೇಷ ಲೇಖನ

# ಮರೆಯದಿರೋಣ ಸುಗ್ಗಿ ಹಬ್ಬದ ಸಂಭ್ರಮ



ಸಂಕ್ರಾಂತಿ ಅಂದಾಕ್ಷಣ ನೆನಪಾಗುವ ಮಾತಿದು. ಎಳ್ಳು ಬೆಲ್ಲ ಇಲ್ಲದ ಸಂಕ್ರಾಂತಿಯನ್ನು ಕಲ್ಪಿಸಿಕೊಳ್ಳಲು ಸಾಧ್ಯವಿಲ್ಲ. ಸಂಕ್ರಾಂತಿಯಲ್ಲಿ ಪುರಾಣ ಕಾಣಿಸುತ್ತದೆ. ವಿಜ್ಞಾನ ಇಣುಕು ಹಾಕುತ್ತದೆ. ಸಂಪ್ರದಾಯ ಮಾತನಾಡುತ್ತದೆ. ಕೃತಜ್ಞಾಭಾವ ಕೈ ಹಿಡಿಯುತ್ತದೆ.

ನೂತನ ವರ್ಷದ ಮೊದಲ ಹಬ್ಬವೆ ಸಂಕ್ರಮಣ. ಪ್ರತಿವರ್ಷ ಜನವರಿ 14 ಇಲ್ಲವೆ 15ರಂದು ಮಕರ ಸಂಕ್ರಾಂತಿ ಹಬ್ಬವನ್ನು ದೇಶದ ಎಲ್ಲಾ ಭಾಗಗಳಲ್ಲಿ ಮತ್ತು ನಮ್ಮ ನೆರೆಯ ರಾಷ್ಟ್ರಗಳಾದ ಶ್ರೀಲಂಕಾ, ಮಲೇಷಿಯಾ, ನೇಪಾಳ, ಬಾಂಗ್ಲಾ ಹೀಗೆ ಅನೇಕ ದೇಶಗಳಲ್ಲಿ ಧಾರ್ಮಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆಯಲ್ಲಿ ಆಚರಣೆ ಮಾಡುವ ಸಂಪ್ರದಾಯ ಕಾಣಬಹುದಾಗಿದೆ. ಸಂಕ್ರಾಂತಿ ದಕ್ಷಿಣ ಭಾರತದ ದೊಡ್ಡ ಹಬ್ಬ. ಮಹಾವಿಷ್ಣು ವರಾಹ ಅವತಾರ ತಾಳಿದ ಕಾಲವಿದು. ಗಂಗೆ ಧರೆಗಿಳಿದ ಪವಿತ್ರ ದಿನ. ಸೃಷ್ಟಿಕರ್ತ ಬ್ರಹ್ಮ ಜಗತ್ತನ್ನು ಸೃಷ್ಟಿಸಿದ ಕಾಲವಿದು. ಶುಭ ಕಾರ್ಯಗಳಿಗೆ ಉತ್ತಮ ಸಮಯವಿದು. ಶಿವ–ಪಾರ್ವತಿ ವಿವಾಹವಾದ ಕಾಲವಿದು, ಪುಣ್ಯ ಸಮಯವಿದು ಎಂದು ಸಂಕ್ರಾಂತಿಯ ವಿಶೇಷತೆಗಳ ಉಲ್ಲೇಖ ಕಾಣುತ್ತೇವೆ.

ಮಕರ ಸಂಕ್ರಮಣ ಹಬ್ಬವನ್ನು ಉತ್ತರಾಯಣ ಪುಣ್ಯಕಾಲ, ಸುಗ್ಗಿಹಬ್ಬ, ಮಂಗಳಕರ ದಿನ, ಮಾಘಮೇಳ, ಸೂರ್ಯದೇವನ ಪೂಜೆ, ಕೊಯ್ಲು ಉತ್ಸವ, ಪೈರು ತೆಗೆಯುವ ಹಬ್ಬ, ಭೋಗಿಹಬ್ಬ, ಪೊಂಗಲ್ ಹಬ್ಬ ಮುಂತಾದ ಹೆಸರುಗಳಲ್ಲಿ ಆಚರಣೆ ಮಾಡುವ ಪರಂಪರೆಯನ್ನು ದೇಶದ ಉದ್ದಗಲದಲ್ಲಿ ನೋಡಬಹುದಾಗಿದೆ. ಮೊದಲನೆಯ ದಿನ ಸುಗ್ಗಿ ಇಲ್ಲವೆ ಭೋಗಿ ಹಬ್ಬವೆಂದು ಕರೆಯಲಾಗುತ್ತದೆ. ಇದನ್ನು ಜನವರಿ 14ರಂದು ಆಚರಣೆ ಮಾಡಲಾಗುತ್ತಿದೆ. ಉತ್ತಮ ಫಸಲು ಬೆಳೆದು ನಮ್ಮ ಬದುಕು ಸುಖ, ಸಂತೋಷ, ನೆಮ್ಮದಿಯಿಂದ ಕೂಡಿರಲೆಂದು ದೇವರಲ್ಲಿ ಮೊರೆ ಹೊಗುವ ಈ ಸುಗ್ಗಿ ಹಬ್ಬದ ಸಂಭ್ರಮ ಎಷ್ಟು ವರ್ಣಿಸಿದರೂ ಸಾಲದು.

ಎರಡನೆಯ ದಿನ ಜನವರಿ 15ರಂದು ಆಚರಣೆ ಮಾಡುವ ಹಬ್ಬವೇ ಮಕರ ಸಂಕ್ರಮಣ. ಮಕರ ರಾಶಿ ಪ್ರಾರಂಭದ ಪುಣ್ಯಕಾಲ. ಸಂಕ್ರಮಣ ದಿನದಂದು ಸೂರ್ಯನು ತನ್ನ ಪಥವನ್ನು ದಕ್ಷಿಣ ಪಥದಿಂದ ಉತ್ತರ ಪಥಕ್ಕೆ ಬದಲಾಯಿಸುವ ಸಂಕ್ರಮಣ ಕಾಲವಾಗಿದೆ. ಸಂಕ್ರಮಣದ ದಿನದಂದು ಹಗಲು–ಇರುಳು ಒಂದೇ ಸಮನಾಗಿ ಅಂದರೆ ಸರಿಯಾಗಿ 12 ಗಂಟೆಗಳ ಕಾಲ ಹಗಲು, 12 ಗಂಟೆಗಳ ಕಾಲ ರಾತ್ರಿಯಾಗಿರುತ್ತದೆ. ಉತ್ತರಾಯಣ ದಿನವಾದ ಇಂದು ಚಳಿಗಾಲ ಮುಗಿದು ಇಂದಿನಿಂದ ಬೇಸಿಗೆಯ ಕಾಲ ಪ್ರಾರಂಭವಾಗುವದು. ಸಂಕ್ರಾಂತಿ ಹಬ್ಬವನ್ನು ಸಮೃದ್ಧಿಯ ಸಂಕೇತವಾಗಿ ನಾಡಿನ ತುಂಬೆಲ್ಲಾ ಸಡಗರ–ಸಂಭ್ರಮ, ಸಂತಸದಿಂದ ಆಚರಣೆ ಮಾಡುತ್ತೇವೆ.

ಸಂಕ್ರಾಂತಿ ದಿನದಂದು ಬೆಳಿಗ್ಗೆ ನದಿ ಇಲ್ಲವೆ ಹೊಂಡಗಳಲ್ಲಿ ಎಳ್ಳು ಮತ್ತು ಅರಿಸಿಣ ಮಿಶ್ರಣವನ್ನು ಹಚ್ಚಿಕೊಂಡು ಪುಣ್ಯಸ್ನಾನ ಮಾಡಿ ಸೂರ್ಯದೇವನ ಪೂಜೆ ಮಾಡುವರು ಮತ್ತು ಪಾಪಗಳೆಲ್ಲ ಪರಿಹಾರವಾಗಲೆಂದು ಬೇಡಿಕೊಳ್ಳುವರು. ಹರಿಯುವ ನೀರಿನಲ್ಲಿ ಈ ಪವಿತ್ರದಿನದಂದು ಸ್ನಾನ ಮಾಡುವದರಿಂದ ಸ್ವರ್ಗಕ್ಕೆ ಹೋಗುತ್ತೇವೆಂಬ ಬಲವಾದ ನಂಬಿಕೆಯು ಇದೆ. ಎಳ್ಳು–ಬೆಲ್ಲ ವಿನಿಮಯ ಮಾಡಿಕೊಂಡು ಎಳ್ಳು ಬೆಲ್ಲದ ಸವಿಯಂತೆ ಬಾಳೋಣ ಎಂದು ಪರಸ್ಪರ ಶುಭ ಕೋರುವರು. ಹಿರಿಯರಿಂದ ಆಶೀರ್ವಾದ ಪಡೆದು ತಮ್ಮ ಬದುಕು ಸುಖ–ಸಂತಸ, ನೆಮ್ಮದಿಯಿಂದ ಕೂಡಿರಲೆಂದು ಪ್ರಾರ್ಥಿಸುವರು.

ಪುಣ್ಯಸ್ನಾನಕ್ಕೆ ಪ್ರಯಾಣ ಮಾಡಿದ ನದಿ ತಟದಲ್ಲಿ ಇಲ್ಲವೆ ತಮ್ಮ ತಮ್ಮ ಸಮೀಪದ ನಿಸರ್ಗ ಸುಂದರ ತಾಣಗಳಲ್ಲಿ ಮನೆ ಮಂದಿಯೆಲ್ಲಾ ಸೇರಿಕೊಂಡು ಹೋಗಿ ಮನೆಯಲ್ಲಿ ತಯಾರಿಸಿದ ಬುತ್ತಿಯನ್ನು ಕಟ್ಟಿಕೊಂಡು ಊಟ ಮಾಡುವ ಸಂಭ್ರಮ ಹಳ್ಳಿಗಳಲ್ಲಿ ಎಳ್ಳೆ ಅಮವ್ಯಾಸೆ ಮತ್ತು ಸೀಗಿ ಹುಣ್ಣಿಮೆಯಲ್ಲಿ ಬೆಳೆದುನಿಂತ ಪೈರಿನಲ್ಲಿ ಊಟ ಮಾಡುವ ಸಡಗರವನ್ನು ನೆನಪಿಸುತ್ತದೆ. ನದಿಯಲ್ಲಿಯ ಮಾಡುವ ಪುಣ್ಯಸ್ನಾನ ವಿಶೇಷವಾಗಿ ತಯಾರಿಸಿಕೊಂಡು ಊಟ ಮಾಡುವ ಪ್ರತಿಯೊಂದು ಆಹಾರ ಪದಾರ್ಥಗಳು ವೈಜ್ಞಾನಿಕ ತಳಹದಿಯಲ್ಲಿ ಇರುವದನ್ನು ಗಮನಿಸಬಹುದಾಗಿದೆ.

ಮೂರನೆಯ ದಿನ ಆಚರಣೆ ಮಾಡುವ ಹಬ್ಬ ಎತ್ತುಗಳ ಮತ್ತು ಪಕ್ಷಿಗಳ ಹಬ್ಬ. ಈ ದಿನದಂದು ಮನೆಯ ಎತ್ತುಗಳನ್ನು ಶುಭ್ರವಾಗಿ ಮೈದೊಳೆದು ಬಣ್ಣಗಳಿಂದ ಶೃಂಗರಿಸಿ ವಿವಿಧ ಅಲಂಕಾರಿಕ ವಸ್ತಗಳು ಗೆಜ್ಜೆ–ಗೊಂಡೆ ಹಾಕಿ ಮೆರವಣಿಗೆ ಮಾಡಲಾಗುತ್ತದೆ. ವರ್ಷದುದ್ದಕ್ಕೂ ನಮ್ಮ ಹೊಲ–ಗದ್ದೆಗಳಲ್ಲಿ ಶ್ರಮವಹಿಸಿ ದುಡಿದು ನಮಗೆಲ್ಲಾ ಬೇಕಾದ ದವಸ ಧಾನ್ಯಗಳನ್ನು ಸಂಪಾದಿಸಲು ಕಾರಣವಾದ ಜಾನುವಾರುಗಳ ಉಪಕಾರ ಸ್ಮರಣೆಗಾಗಿ ಅಂದು ಗೌರವಿಸುವದು ಒಂದು ಕಡೆಯಾದರೆ, ದೇವಸ್ಥಾನ ಛಾವಣಿಯ ಮೇಲೆ ಇರುವ ಪಕ್ಷಿಗಳಿಗೆಲ್ಲಾ ಬೆಳದ ಕಾಳುಗಳನ್ನು ಹಾಕಿ ಅವುಗಳ ಉಪಕಾರ ಸ್ಮರಣೆಯನ್ನು ಮಾಡುವದನ್ನು ಕೆಲವು ಕಡೆ ನೋಡುತ್ತೇವೆ.

ನಾಲ್ಕನೆಯ ದಿನ ಕೆಲವು ಕಡೆ ಕೋಲಾಟ, ಎತ್ತಿನ ಸ್ಪರ್ಧೆ, ಕರ್ನಾಟಕ, ಮಹಾರಾಷ್ಟ್ರ, ಗುಜರಾತ ರಾಜ್ಯಗಳಲ್ಲಿ ಗಾಳಿಪಟ ಹಾರಿಸುವ ಆಟ ಬಹಳ ಸೊಗಸಾಗಿರುತ್ತದೆ.

–ವಿಶ್ವನಾಥ ಕಮ್ಮಾರ.

## ಸಂಭ್ರಮದ ಭೋಗಿ ಹಬ್ಬ ಆಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಕರ ಸಂಕ್ರಾಂತಿಯ ಹಿಂದಿನ ದಿನ ಬರುವ ಭೋಗಿ ಹಬ್ಬವನ್ನು ನರೇಗಲ್ಲ ಹೋಬಳಿಯಾದ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಧನುರ್ಮಾಸದಲ್ಲಿ ಬರುವ ಭೋಗಿ ಹಬ್ಬ ವಿಶೇಷತೆಯಿಂದ ಕೂಡಿದೆ. ಸುಮಂಗಲೆಯರು ವೈದಿಕ ಮುತ್ತೈದೆಯರಿಗೆ ಮರದ ಬಾಗಿನ ನೀಡುವ ಮೂಲಕ ಹಬ್ಬವನ್ನು ಆಚರಿಸಿದರು.

ಸೂರ್ಯ ದಕ್ಷಿಣಾಯನದಿಂದ ಉತ್ತರಾಯನದ ಕಡೆಗೆ ಚಲಿಸುವ ಮಹಾ ಪರ್ವವೇ ಸಂಕ್ರಮಣ ಎನಿಸಿಕೊಳ್ಳುತ್ತದೆ. ಮಕರ ಸಂಕ್ರಮಣದ ಮೊದಲ ಹಬ್ಬವೇ ಭೋಗಿ ಹಬ್ಬವಾಗಿದೆ.

ಮರದ ಬಾಗಿನ ನೀಡಿ ಬಂದ ನಂತರ ಮನೆಯಲ್ಲಿ ದೇವರಿಗೆ ವಿಶೇಷ ಪೂಜೆ ನೆರವೇರಿಸಿ ಹುಗ್ಗಿ, ಗೊಜ್ಜು, ಸೆಜ್ಜೆ ರೊಟ್ಟಿ, ಚಳ್ಳವರಿಕಾಯಿ ಪಲ್ಯ, ಬೆಣ್ಣೆ ಮುಂತಾದವುಗಳನ್ನು



ದೇವರಿಗೆ ನೈವೇದ್ಯ ಮಾಡಿ ಮನೆ ಮಂದಿಯೆಲ್ಲ ಸೇರಿ ಊಟ ಮಾಡುತ್ತಾರೆ.

ಧನುರ್ಮಾಸದಲ್ಲಿ ವಿಶೇಷವಾದ ಚಳಿ ಇರುತ್ತದೆ. ವಿಪರೀತವಾದ ಚಳಿಯನ್ನು ನಮ್ಮ ದೇಹವು ತಡೆದುಕೊಳ್ಳಲು ಬೇಕಾದ ಆಹಾರ ಪದ್ಧತಿಯನ್ನು ಇದರಲ್ಲಿ ಅಡಕಗೊಳಿಸಲಾಗಿದೆ. ಚಳಿಗಾಲದಲ್ಲಿ ಚರ್ಮ ಸುಕ್ಕುಗಟ್ಟಿ ಕೈಕಾಲುಗಳು ಒಡೆಯುವುದು ಸರ್ವೇಸಾಮಾನ್ಯ. ಇಂತಹ ಸಂಧರ್ಭದಲ್ಲಿ ಎಣ್ಣೆ ಅಂಶಗಳಿರುವ ಪದಾರ್ಥಗಳನ್ನು ಸೇವಿಸಿ ದೇಹವನ್ನು ಬೆಚ್ಚಗೆ ಇಟ್ಟುಕೊಳ್ಳುವಲ್ಲಿ ಎಳ್ಳು ಬಹಳಷ್ಟು ಸಹಾಯ ಮಾಡುತ್ತದೆ. ಅದಕ್ಕಾಗಿ ಎಳ್ಳಿನ ಪದಾರ್ಥಗಳನ್ನು ಈ ಸಮಯದಲ್ಲಿ ಹೆಚ್ಚಾಗಿ ಬಳಕೆ ಮಾಡಲಾಗುತ್ತಿದೆ.

## ದಕ್ಷಿಣ ಭಾರತ ವಿಜ್ಞಾನ ಪ್ರದರ್ಶನಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲ್ಲಿಯ ಪ್ರಜೆಂಟೇಶನ್ ಬಾಲಕಿಯರ ಪ್ರೌಢಶಾಲೆಯಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿ ಅಫ್‌ಶೀನ್ ಎಂ.ರಾಹುತ್ ರಾಯಾಪುರದಲ್ಲಿ ಜರುಗಿದ ರಾಜ್ಯಮಟ್ಟದ ವಿಜ್ಞಾನ ವಸ್ತುಪ್ರದರ್ಶನದಲ್ಲಿ ಅತ್ಯುತ್ತಮ ಪ್ರದರ್ಶನವನ್ನು ನೀಡಿ, ದಕ್ಷಿಣ ಭಾರತ ವಲಯ ಮಟ್ಟದ ವಿಜ್ಞಾನ ವಸ್ತುಪ್ರದರ್ಶನಕ್ಕೆ ಆಯ್ಕೆಯಾಗಿದ್ದಾಳೆ.

ಈ ವಿಜ್ಞಾನ ವಸ್ತುಪ್ರದರ್ಶನವು ಗುರುಡಿಯಮ್ ಇಂಟರ್‌ನ್ಯಾಷನಲ್ ಸ್ಕೂಲ್, ಹೈದರಾಬಾದ್, ತೆಲಂಗಾಣದಲ್ಲಿ ಜನವರಿ 19ರಿಂದ 23ರವರೆಗೆ ನಡೆಯಲಿದೆ.

ಅಫ್‌ಶೀನ್ ಎಂ.ರಾಹುತ್ ಅಡ್ವಾನ್ಸ್‌ಡ್ ಸೆನ್ಸರ್ ಲೈಟ್ಸ್ ಎಂಬ ಮಾದರಿಯನ್ನು ಪ್ರಸ್ತುತಪಡಿಸಿದ್ದಳು. ವಿದ್ಯಾರ್ಥಿನಿಯ ಸಾಧನೆಗೆ ಡಯಟ್‌ನ ಪ್ರಾಚಾರ್ಯರು, ಹಿರಿಯ ಉಪನ್ಯಾಸಕರು, ಉಪನ್ಯಾಸಕರು ಮತ್ತು ಶಾಲೆಯ ಮುಖ್ಯ ಶಿಕ್ಷಕಿ ಸಿಸ್ಟರ್ ರೆನಿಟಾ ಬಿಎಸ್, ಶಾಲೆಯ ಮಾರ್ಗದರ್ಶಿ ಶಿಕ್ಷಕಿ ಭಾರತಿ ಭಾವಿಕಟ್ಟಿ ಹಾಗೂ ಶಾಲೆಯ ಸರ್ವ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.



## ಪ್ರಾಮಾಣಿಕ ಪ್ರಜ್ವಲ್ ರಿತ್ತಿಗೆ ಉಚಿತ ಶಿಕ್ಷಣ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಮನೆ ನಿರ್ಮಾಣದ ಕಾಮಾಗಾರಿಯ ತಳಪಾಯದಲ್ಲಿ ಸಿಕ್ಕ ಚಿನ್ನಾಭರಣಗಳ ನಿಧಿಯನ್ನು ಪ್ರಾಮಾಣಿಕವಾಗಿ ಸರಕಾರಕ್ಕೆ ತಲುಪಿಸಿದ ಬಿ.ಎಚ್.ಪಾಟೀಲ ಸಂಸ್ಥೆಯ ವಿದ್ಯಾರ್ಥಿ ಪ್ರಜ್ವಲ್ ರಿತ್ತಿ ಅವರಿಗೆ ಪಿ.ಯು.ಸಿವರೆಗೂ ಉಚಿತ ಶಿಕ್ಷಣ ನೀಡಲಾಗುವುದು ಎಂದು ಸಂಸ್ಥೆಯ ಉಪಾಧ್ಯಕ್ಷ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಹೇಳಿದರು.

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದ 8ನೇ ತರಗತಿಯಲ್ಲಿ ಓದುತ್ತಿರುವ ಪ್ರಜ್ವಲ್ ರಿತ್ತಿಯವರನ್ನು ಸನ್ಮಾನಿಸಿ ಮಾತನಾಡಿದ ಅವರು, ಸಂಸ್ಥೆಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಸರ್ವ ಪದಾಧಿಕಾರಿಗಳ ಸಭೆ ಕರೆದು ಈ ತೀರ್ಮಾನವನ್ನು ಕೈಗೊಳ್ಳಲಾಗಿದೆ ಎಂದರು.

ಶಾಲೆಯಲ್ಲಿ ಪ್ರಾಮಾಣಿಕತೆಯಿಂದ ಓದುತ್ತಿರುವ ಪ್ರಜ್ವಲ್ ತನ್ನ ಮನೆ ನಿರ್ಮಾಣದ ಪಾಯದಲ್ಲಿ ದೊರೆತ ಅಮೂಲ್ಯವಾದ ಚಿನ್ನಾಭರಣಗಳ ನಿಧಿಯನ್ನು ಸರಕಾರಕ್ಕೆ ನೀಡಿ ಸಾಮಾಜಿಕ ಬದುಕಿನಲ್ಲಿಯೂ ಸಹ ಪ್ರಮಾಣಿಕತೆ ತೋರಿದ್ದು, ಅವರ ಭವಿಷ್ಯದ ಶಿಕ್ಷಣಕ್ಕೆ ಜನತಾ ವಿದ್ಯಾವರ್ಧಕ ಸಂಸ್ಥೆಯು ಪಿ.ಯುವರೆಗೂ ಉಚಿತ ಶಿಕ್ಷಣವನ್ನು ನೀಡುತ್ತದೆ ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷ ಐ.ಎನ್. ಕುಂಬಾರ ಮಾತನಾಡಿ, ಪ್ರಜ್ವಲ್‌ನಂತಹ ಪ್ರಾಮಾಣಿಕ ವಿದ್ಯಾರ್ಥಿಗಳು ಮನೆ ಮನೆಯಲ್ಲಿ ಇರಬೇಕು. ಅಂದಾಗ ಮಾತ್ರ ನಮ್ಮ ಸಂಸ್ಥೆ ಮತ್ತು ಗ್ರಾಮಕ್ಕೆ ಕೀರ್ತಿ ಬರುತ್ತದೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಪ್ರಕಾಶ ಎಫ್.ತೋಪಿನ, ಸದಸ್ಯರಾದ ವಿ.ವಿ. ಗಂಧದ, ಕೆ.ಎಂ. ಪಾಟೀಲ, ತಿಪ್ಪಣ್ಣ ಅಂಬಕ್ಕಿ, ಮಲ್ಲಪ್ಪ ಕಮತರ, ಪ್ರಾಚಾರ್ಯ ಬಿ.ವಿ. ಪಾಟೀಲ, ಪ್ರೌಢಶಾಲೆಯ ಹಿರಿಯ ಶಿಕ್ಷಕ ಎ.ಎನ್. ಪೂಜಾರ, ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು.

### ಬಲ್ಡೋಟಾ ಕಾರ್ಖಾನೆ ವಿರೋಧಿ ಹೋರಾಟಕ್ಕೆ 75ನೇ ದಿನ | ಸಾಹಿತಿ ಪ್ರೊ. ಕೆ.ಎಸ್. ಭಗವಾನ್ ಭಾಗಿ

# ಜನಪರ ಸಿಎಂ ಜನರ ಸಮಸ್ಯೆ ಪರಿಹರಿಸಲಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಾನು ಹಳ್ಳಿಯವನು. ರೈತರ ಎಲ್ಲ ಕೆಲಸ ಮಾಡಿದವನು. ರೈತರು ಬೂದಿ, ಹೊಗೆಯಲ್ಲಿ ಹೇಗೆ ಬದುಕಬೇಕು? ಇಡೀ ರಾಜ್ಯದ ಜನರಿಗೆ ವಿಷಯ ತಿಳಿಸುವಂತೆ ಪತ್ರಿಕಾ ಹಾಗೂ ಟಿವಿ ಮಾಧ್ಯಮದವರು ಪೂರ್ಣ ಪ್ರಯತ್ನ ಮಾಡಬೇಕು ಎಂದು ಹಿರಿಯ ಸಾಹಿತಿ ಪ್ರೊ. ಕೆ.ಎಸ್. ಭಗವಾನ್ ಕೋರಿದರು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತ ರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಮೂಲಕ ನಗರಸಭೆ ಎದುರು ಹಮ್ಮಿಕೊಂಡಿರುವ ಬಲ್ಡೋಟಾ, ಕಿರ್ಲೋಸ್ಕರ್, ಕಲ್ಯಾಣಿ, ಮುಕುಂದ್ ಸುಮಿ, ಎಕ್ಸ್ ಇಂಡಿಯಾ, ತನುಷ್, ದೃವದೇಶ ಸೇರಿದಂತೆ ಅನೇಕ ಪರಿಸರ ಮಾರಕ ಕಾರ್ಖಾನೆ ವಿರೋಧಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹದ 75ನೇ ದಿನದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.




ಈಗಾಗಲೇ ಇರುವ ಕಾರ್ಖಾನೆಗಳ ಸಂಕಷ್ಟವನ್ನೇ ತಡೆದುಕೊಳ್ಳಲು ಸಾಧ್ಯವಿಲ್ಲ. ಇನ್ನಷ್ಟು ಬಂದರೆ ಇಲ್ಲಿನ ಗತಿಯೇನು ಎಂದು ಪ್ರಶ್ನಿಸಿದ ಅವರು, ರಾಜ್ಯದಲ್ಲಿ ಸಂಪರ್ಕದ ಕೊರತೆ ಇದೆ, ಇಲ್ಲಿ ನಡೆಯುವ ಸಮಸ್ಯೆ ಬೆಂಗಳೂರು ತಲುಪವುದೇ ಇಲ್ಲ. ಆದ್ದರಿಂದ ಹೋರಾಟಗಾರರ ನಿಯೋಗದ ಜೊತೆಗೆ ವಿಧಾನಸೌಧಕ್ಕೆ ಹೋರಾಟವನ್ನು ತಲುಪಿಸೋಣ ಎಂದರು.

ಹಿರಿಯ ವಕೀಲ ರಾಜು ಬಾಕಳೆ ಮಾತನಾಡಿ, ಕಾರ್ಖಾನೆ ಆರಂಭದ ಹಂತದಲ್ಲೇ ನ್ಯಾಯಾಲಯ ಮತ್ತು ರೈತರ ಬಲಪ್ರಯೋಗದಿಂದಲೂ ಸಹ ಅಂದು ಭೂಮಿ ಕಸಿದುಕೊಳ್ಳುವದನ್ನು ತಡೆಯಲು ಪ್ರಯತ್ನ ಮಾಡಿ, ದಶಕಗಳ ಕಾಲ ನ್ಯಾಯಾಲಯದಲ್ಲಿ ಹೋರಾಡಿ ಸೋತಿದ್ದೇವೆ. ಆದರೆ ಈಗ ಜನಸಂಗ್ರಾಮದ ಮೂಲಕ ಗೆಲವು ಸಾಧಿಸುತ್ತೇವೆ ಎಂಬ ವಿಶ್ವಾಸವಿದೆ ಎಂದರು.

ರೈತ ಮಹಿಳೆ ಗಿರಿಯಮ್ಮ ಕುಣಿಕೇರಿ ಮತ್ತು ಹಾಲವರ್ತಿಯ ಕೃಷಿಕ ಮಾರ್ಕಂಡಯ್ಯ ಹಿರೇಮಠ ಮಾತನಾಡಿ, ಬದುಕಿ ಬಾಳಿದ ಊರು ಬಿಡುವ ಮನಸ್ಸಿಲ್ಲ, ಇದೇ ಕಾರಣಕ್ಕೆ ಇಲ್ಲಿನ ಹಿರಿಯರ ಆರೋಗ್ಯ ಕೆಟ್ಟಿದೆ, ಮಕ್ಕಳು ಸದಾ ಕೆಮ್ಮು ಎನ್ನುತ್ತಿದ್ದರೆ, ಹಲವರಿಗೆ ಕ್ಯಾನ್ಸರ್ ಇದೆ ಎಂದು ಭಾವುಕರಾದರು. ದದೇಗಲ್ ಸದ್ಗುರು ಸಿದ್ಧಾರೂಢ ಮಠದ ಶ್ರೀ ಆತ್ಮಾನಂದ ಸ್ವಾಮೀಜಿಗಳು ಆಶೀರ್ವಚನ ನೀಡಿದರು.

> ಕೃಷಿ ಬೆಲೆ ಆಯೋಗದ ಸದಸ್ಯ ಡಿ.ಹೆಚ್. ಪೂಜಾರ ಮಾತನಾಡಿ, ಶಾಸಕರು ಮೂರು ತಿಂಗಳಿಂದ ನಡೆಯುತ್ತಿರುವ ಹೋರಾಟದ ಕಡೆಗೆ ಸೌಜನ್ಯದ ಭೇಟಿ ಸಹ ಮಾಡಿಲ್ಲ.
>
> ಕ್ಷೇತ್ರದ ಜನರ ಜೀವನ, ಉಸಿರು, ಬದುಕು ಮತ್ತು ಕೃಷಿ ಮುಖ್ಯ ಎನ್ನಬೇಕೇ ಹೊರತು ಫಲಾಯನವಾದ ಮಾಡಬಾರದು. ಹೋರಾಟವನ್ನು ಅತೀ ಶೀಘ್ರದಲ್ಲೇ ರಾಜಕ್ಕೆ ವಿಸ್ತರಿಸಲಾಗುವದು ಎಂದರು.

ಧರಣಿಯಲ್ಲಿ ಪ್ರಮುಖರಾದ ಅಲ್ಲಮಪ್ರಭು ಬೆಟ್ಟದೂರು, ಮಲ್ಲಿಕಾರ್ಜುನ ಗೋನಾಳ, ಮಂಜುನಾಥ ಜಿ.ಗೊಂಡಬಾಳ, ಪ್ರಕಾಶಕ ಡಿ.ಎಂ. ಬಡಿಗೇರ, ಎಚ್. ಎಸ್. ಪಾಟೀಲ್, ಎ.ಎಂ. ಮದರಿ, ಡಿ.ಎಚ್. ಪೂಜಾರ, ರಾಜು ಬಾಕಳೆ, ನಜೀರಸಾಬ್ ಮೂಲಿಮನಿ, ಭೀಮಸೇನ ಕಲಕೇರಿ, ಜ್ಯೋತಿ ಎಂ.ಗೊಂಡಬಾಳ, ಸಾವಿತ್ರಿ ಮುಜುಮದಾರ, ಶಾಯಿದ್ ತಹಸೀಲ್ದಾರ, ದಾನಪ್ಪ ಕವಲೂರು, ಅಲೀಮುದ್ದಿನ್, ಸುರೇಶ ಕುಂಬಾರ, ಶುಕರಾಜ ತಾಳಕೇರಿ, ಮಂಜು ಹಾಲವರ್ತಿ, ಎಚ್.ಬಿ. ಸರೋಜಮ್ಮ, ಎಸ್.ಬಿ. ರಾಜೂರು, ಶಂಭುಲಿಂಗಪ್ಪ ಹರಗೇರಿ, ಎಲ್. ಎಫ್. ಪಾಟೀಲ್, ಮೂಕಪ್ಪ ಮೇಸ್ತ್ರಿ ಬಸಾಪುರ, ಶರಣು ಗಡ್ಡಿ, ರವಿ ಕಾಂತನವರ, ಗವಿಸಿದ್ದಪ್ಪ ಹಲಿಗಿ, ಜಿ.ಎಸ್. ಕಡೇಮನಿ, ಮಹಾದೇವಪ್ಪ ಮಾವಿನಮಡು, ಬಸವರಾಜ ನರೇಗಲ್, ಯಮನೂರಪ್ಪ ಹಾಲಳ್ಳಿ ಬಸಾಪುರ, ಮಂಗಳೇಶ ರಾಠೋಡ, ಮಂಜುನಾಥ ಕವಲೂರು, ಸಿ.ಬಿ. ಪಾಟೀಲ್, ಸುಂಕಪ್ಪ ಮೀಸಿ, ಮಲ್ಲಪ್ಪ ಮಾ.ಪಾ, ಗಣೇಶ ವಿಶ್ವಕರ್ಮ, ಸುರೇಶ ಪೂಜಾರ, ಸದಾಶಿವ ಪಾಟೀಲ್ ಮುಂತಾದವರಿದ್ದರು.

### ಲಕ್ಕುಂಡಿ ಗ್ರಾಮದಲ್ಲಿ ಮಹಿಳಾ, ಮಕ್ಕಳ, ವಿಕಲಚೇತನರ ಗ್ರಾಮ ಸಭೆ ಯಶಸ್ವಿ

# ಮಕ್ಕಳ ಬೇಡಿಕೆಗಳನ್ನು ಸೂಕ್ಷ್ಮವಾಗಿ ಗಮನಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳ ಬೇಡಿಕೆ ಈಡೇರಿಸುವಲ್ಲಿ ಅಧಿಕಾರಿಗಳು ಮಕ್ಕಳಿಗೆ ನಿರಾಶೆಯಾಗದಂತೆ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಶಾಸಕ ಸಿ.ಸಿ. ಪಾಟೀಲ ಸಲಹೆ ನೀಡಿದರು.

ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ಗ್ರಾಮ ಪಂಚಾಯಿತಿಯು ಸ್ವಾಮಿ ವಿವೇಕಾನಂದರ 144ನೇ ಜನ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಮಕ್ಕಳ, ಮಹಿಳಾ ಹಾಗೂ ವಿಶೇಷಚೇತನರ ಗ್ರಾಮ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.




ಮಕ್ಕಳ ಬೇಡಿಕೆಗಳು ಬಹಳಷ್ಟು ಇರುತ್ತವೆ. ಅವುಗಳನ್ನು ಸೂಕ್ಷ್ಮವಾಗಿ ಗಮನಿಸಬೇಕು, ಅವರಿಗೆ ನಿರಾಶೆಯಾದರೆ ಮನಸ್ಸಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಚಿಕ್ಕ ವಯಸ್ಸಿನಲ್ಲಿ ಮಹತ್ತರ ಸಾಧನೆ ಮಾಡಿದ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ ವ್ಯಕ್ತಿತ್ವವನ್ನು ಅಳವಡಿಸಿಕೊಳ್ಳಬೇಕು. ಈ ಪ್ರೌಢಶಾಲೆಯ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗಾಗಿ ಶಾಸಕರ ಅನುದಾನದಲ್ಲಿ 5 ಲಕ್ಷ ರೂ ಅನುದಾನವನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರು ಮಾತನಾಡಿ, ಮಕ್ಕಳಿಗೆ ಅವರ ಹಕ್ಕುಗಳ ಬಗ್ಗೆ ಇಂತಹ ಗ್ರಾಮ ಸಭೆಗಳಿಂದ ತಿಳುವಳಿಕೆ ಬರುತ್ತದೆ. ಈ ದಿಸೆಯಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯ ದೃಷ್ಟಿಯಿಂದ ಅಧಿಕಾರಿಗಳು ಅವರ ಸಮಸ್ಯೆಗೆ ಈ ಸಭೆಯಲ್ಲಿ ಸ್ಪಂದಿಸಬೇಕು ಎಂದರು.

ಬಿ.ಇ.ಓ ವಿ.ವಿ. ನಡುವಿನಮನಿ ಮಾತನಾಡಿ, ಮಕ್ಕಳ ಶೈಕ್ಷಣಿಕ ಕಲಿಕೆಗಾಗಿ ಜನಪ್ರತಿನಿಧಿಗಳ ಸಹಾಯ-ಸಹಕಾರದೊಂದಿಗೆ ಮೂಲಭೂತ ಸೌಲಭ್ಯವನ್ನು ಒದಗಿಸಲಾಗುವುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾ.ಪಂ ಅನುದಾನದ ಇತಿಮಿತಿಯಲ್ಲಿ ಗ್ರಾಮದ ಅಭಿವೃದ್ಧಿಯೊಂದಿಗೆ ಮಕ್ಕಳ ಶೈಕ್ಷಣಿಕ ಪರಿಸರ ನಿರ್ಮಿಸಲು ಪ್ರಯತ್ನ ಮಾಡಿದ್ದೇನೆ. ಈವರೆಗೆ ಸಹಕಾರ ನೀಡಿದ ಎಲ್ಲ ಅಧಿಕಾರಿ ವರ್ಗಕ್ಕೆ ಚಿರಋಣಿಯಾಗಿದ್ದೇನೆ ಎಂದರು.

ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಜಿ.ಪಂ ಯೋಜನಾಧಿಕಾರಿ ಎಂ.ವಿ. ಚಳಗೇರಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ, ಸಮಾಜ ಕಲ್ಯಾಣ ಇಲಾಖೆಯ ನಂದಾ ಹನಬರಟ್ಟಿ, ಗ್ರಾಮೀಣ ಸಿ.ಪಿ.ಐ ಸಿದ್ಧರಾಮೇಶ ಗಡೇದ, ಸಿ.ಡಿ.ಪಿ.ಓ ಮೇಲ್ವಿಚಾರಕಿ ಕಮತ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರೂಪಾ ಬೆಟಗೇರಿ, ಪೊಲೀಸ್ ಇಲಾಖೆಯ ಭಾರತಿ ಚಳಗೇರಿ, ವಿಕಲಚೇತನ ಇಲಾಖೆಯ ಖಾಜಾಹುಸೇನ ಕಾತರಕಿ, ಸಖಿ ಒನ್ ಕೇಂದ್ರದ ಸುಜಾತಾ ಶಾಸ್ತ್ರೀಮಠ, ಅಶ್ವಿನಿ ಹಿರೇಮಠ, ಅಂಗನವಾಡಿ ಮೇಲ್ವಿಚಾರಕಿ ಶಾಹಿದಬೇಗಂ ಹತ್ತಿವಾಲೆ, ಕಾರ್ಮಿಕ ಇಲಾಖೆಯ ಶ್ರೀಶೈಲ ಸೋಮನಕಟ್ಟಿ, ವಿದ್ಯಾರ್ಥಿ ಪ್ರತಿನಿಧಿಗಳಾಗಿ ನಂದೀಶ ಕಲಬಂಡಿ, ಪಾರ್ವತಿ ಪಾಟೀಲ ಗವಿಶಿದ್ದಪ್ಪ ಯಲಿಶಿರುಂಜ, ರವಾಜಾನ ತಹಸೀಲ್ದಾರ, ಗ್ರಾ.ಪಂ ಸದಸ್ಯರು ವೇದಿಕೆಯಲ್ಲಿದ್ದರು. ಪಿ.ಡಿ.ಓ ಅಮೀರನಾಯಕ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ವೈ. ವೈ. ಬೆಟಗೇರಿ ನಿರೂಪಿಸಿದರು. ಕಾರ್ಯದರ್ಶಿ ಎಂ.ಎ. ಗಾಜಿ ವಂದಿಸಿದರು.

ಶಾಲಾ ವಿದ್ಯಾರ್ಥಿಗಳು ಮತ್ತು ಪ್ರವಾಸಿಗರು ಸಂಚರಿಸುವ ರಸ್ತೆಯಲ್ಲಿ ಮಲ-ಮೂತ್ರ ವಿಸರ್ಜನೆ ಮಾಡುವವರ ವಿರುದ್ಧ ಕ್ರಮ ಜರುಗಿಸಲಾಗವುದು. ಈಗಾಗಲೇ ನೂರಾರು ಕುಟುಂಬಗಳು ಸರಕಾರದ ಅನುದಾನದ ಪಡೆದು ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಂಡರೂ ಸಹ ಬಯಲು ಮಲ-ಮೂತ್ರ ವಿಸರ್ಜನೆ ಮಾಡುತ್ತಿದ್ದು, ಅವರಿಗೆ ನೀಡಿದ ಅನುದಾನವನ್ನು ಮರಳಿ ಪಡೆಯಲಾಗುವುದು. ಶಾಲೆ, ಸರಕಾರಿ ಕಾರ್ಯಾಲಯದ ಹತ್ತಿರ ವಾಹನಗಳಲ್ಲಿ ಧ್ವನಿವರ್ಧಕ ಬಳಕೆ ಮಾಡುವವರಿಗೆ 100 ರೂ ದಂಡ ವಿಧಿಸಲಾಗುವುದು ಎಂದು ಪಿ.ಡಿ.ಓ ಅಮೀರನಾಯಕ ಎಚ್ಚರಿಕೆ ನೀಡಿದರು.

ಮಹಿಳಾ ಗ್ರಾಮ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಸಖಿ ಒನ್ ಕೇಂದ್ರದ ಅಶ್ವಿನಿ ಶಾಸ್ತ್ರೀಮಠ, ಮಹಿಳೆಯರು ತಮ್ಮ ಶೋಷಣೆ ಮತ್ತು ದೌರ್ಜನ್ಯವನ್ನು ವಿರೋಧಿಸಲು ಕಾನೂನಿನ ನೆರವು ಪಡೆಯಬೇಕು ಎಂದು ಸಲಹೆ ನೀಡಿದರು. ಪೊಲೀಸ್ ಇಲಾಖೆಯ ಭಾರತಿ ಚಳಗೇರಿ ಮಾತನಾಡಿ, ಮಹಿಳೆಯರು ತಮ್ಮ ಚಿನ್ನಾಭರಣಗಳನ್ನು ಗದ್ದಲದ ಪ್ರದೇಶದಲ್ಲಿ ಹಾಕಿಕೊಳ್ಳಬೇಡಿ, ಮೊಬೈಲಿನಲ್ಲಿ ತಮ್ಮ ವೈಯಕ್ತಿಕ ಫೋಟೋಗಳನ್ನು ಹಾಕಬೇಡಿ ಎಂದು ಎಚ್ಚರಿಸಿದರು. ಅಂಗನವಾಡಿ ಮೇಲ್ವಿಚಾರಕಿ ಶಾಹಿದಬೇಗಂ ಹತ್ತಿವಾಲೆ, ಸಿ.ಡಿ.ಪಿ.ಓ ಮೇಲ್ವಿಚಾರಕಿ ಕಮತ ಮಾತನಾಡಿದರು. ಖಾಜಾಹುಸೇನ ಕಾತರಕಿ ವಿಕಲಚೇತನರಿಗೆ ಸರಕಾರದಿಂದ ದೊರೆಯುವ ಸೌಲಭ್ಯದ ಕುರಿತು ವಿವರಿಸಿದರು.

## ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

▶▶ ಮೊದಲನೇ ಪುಟದಿಂದ

ನೆರವನ್ನು ನೀಡಲು ಎಲ್ಲಾ ಉದ್ಯೋಗದಾತರಿಂದ, ಸಂಸ್ಥೆಗಳಿಂದ ಹಾಗೂ ಸಾರ್ವಜನಿಕರಿಂದ ದೇಣಿಗೆಯನ್ನು ಪಡೆಯುವುದು ಅವಶ್ಯವಿರುತ್ತದೆ.

ಮೇಲ್ಕಂಡ ಅಂಶಗಳ ಅನುಷ್ಠಾನಕ್ಕಾಗಿ ಉದ್ಯೋಗ ದಾತ-ರಿಂದ, ವಾಣಿಜ್ಯ ಸಂಸ್ಥೆಗಳಿಂದ ಹಾಗೂ ಸಾರ್ವಜನಿಕರಿಂದ ದೇಣಿಗೆಯನ್ನು ನೇರವಾಗಿ ಕರ್ನಾಟಕ ರಾಜ್ಯ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ Canara Bank Account Number: 110058103941, IFSC Code: CNRB0007295, Bangalore Workers Welfare Board Branch, Bangalore ಗೆ ಜಮೆ ಮಾಡಲು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ-ಗದಗ, ಕಾರ್ಮಿಕ ಅಧಿಕಾರಿಗಳ ಕಛೇರಿ ರೂಮ್ ನಂ-124 ಜಿಲ್ಲಾಡಳಿತ ಭವನ ಗದಗ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಗದಗ ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ ಅಧ್ಯಕ್ಷರಾದ ಸಿ.ಎನ್. ಶ್ರೀಧರ್ ಅವರು ತಿಳಿಸಿದ್ದಾರೆ.

## ರಾಷ್ಟ್ರೀಯ ಯುವದಿನ ಸಮಾರಂಭ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸನಾತನ ಸಂಸ್ಕೃತಿಯ ಶಬ್ದಗಳಿಗೆ ಭಾವ ತುಂಬಿ ಜಗದಾದ್ಯಂತ ವ್ಯಕ್ತಿತ್ವ ನಿರ್ಮಾಣದ ಜೊತೆಗೆ ರಾಷ್ಟ್ರ ಪ್ರೇಮವನ್ನು ಬೆಸೆಯುವ, ಆಧ್ಯಾತ್ಮಿಕ ಚಿಂತನಾ ಶಿಖರವನ್ನು ತಲುಪಲು ಬೇಕಾದ ಜೀವನ ಮೌಲ್ಯಗಳನ್ನು ಪ್ರತಿಪಾದಿಸಿದ ಸ್ವಾಮಿ ವಿವೇಕಾನಂದರು ಸನಾತನ ಸಂಸ್ಕೃತಿಯ ಭಾವಗೀತವೇ ಆಗಿದ್ದಾರೆ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜರುಗಿದ 'ರಾಷ್ಟ್ರೀಯ ಯುವದಿನ ಸಮಾರಂಭ'ದಲ್ಲಿ ಮಾತನಾಡಿದರು.

ಪ್ರೊ. ರಾಹುಲ್ ಒಡೆಯರ್ ಮಾತನಾಡುತ್ತಾ, ವಿವೇಕಾನಂದರ ಪಾತ್ರ ನಿರ್ಮಾಣದ ಉಲ್ಲೇಖ ಮಾಡಿ, ಕೇವಲ ಉದ್ಯೋಗ ಪಡೆಯುವ ಉದ್ದೇಶದಿಂದ ಅಲ್ಲದೆ, ಸಮಾಜಕ್ಕೆ ಉಪಯುಕ್ತವಾಗುವ ದೃಷ್ಟಿಯಿಂದ ಯುವಕರು ತಮ್ಮ ಜೀವನ ರೂಪಿಸಿಕೊಳ್ಳಬೇಕು ಎಂದರು.

ಯುವದಿನದ ಆಚರಣೆಯ ಪೂರ್ವದಲ್ಲಿ ಆಡಳಿತಾಧಿಕಾರಿಗಳಾದ ಎಮ್.ಸಿ. ಹಿರೇಮಠಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ತಮ್ಮ ಭಾವನಮನಗಳನ್ನು ಸಲ್ಲಿಸಿದರು. ಸಮಾರಂಭದಲ್ಲಿ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ ಮುಲ್ಲಾ, ಪ್ರೊ. ಪುನೀತ ದೇಶಪಾಂಡೆ ಉಪಸ್ಥಿತರಿದ್ದರು.



ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಡಂಬಳ ಗ್ರಾಮದ ಸರಕಾರಿ ಹೆಣ್ಣುಮಕ್ಕಳ ಶಾಲೆಯ ವಿದ್ಯಾರ್ಥಿನಿ ರಕ್ಷಿತಾ ನಂಜಪ್ಪನವರ ಚಿತ್ರಕಲೆಯಲ್ಲಿ ಪ್ರಥಮ, ಭಕ್ತಿಗೀತೆ ಸ್ಪರ್ಧೆಯಲ್ಲಿ ಯಶಸ್ವಿನಿ ಹಡಪದ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗುವುದರ ಮೂಲಕ ಸಾಧನೆ ಮಾಡಿದ್ದಾರೆ. ಸಾಧಕ ವಿದ್ಯಾರ್ಥಿನಿಯರಿಗೆ ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರು ಹಾಗೂ ಗ್ರಾಮಸ್ಥರು, ಶಿಕ್ಷಣ ಪ್ರೇಮಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ

## ಶ್ರೀ ಸಿದ್ಧರಾಮೇಶ್ವರರ ಜೀವನ ಪ್ರತಿಯೊಬ್ಬರಿಗೂ ಪ್ರೇರಣೆ




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಶಿವಯೋಗಿ ಶ್ರೀ ಸಿದ್ಧರಾಮೇಶ್ವರರ ಜಯಂತಿಯನ್ನು ಇಂದು ಅರ್ಥಪೂರ್ಣವಾಗಿ ಆಚರಿಸುತ್ತಿದ್ದೇವೆ. ಅವರ ಜೀವನವು ನಮಗೆ ಪ್ರೇರಣೆಯಾಗಿದೆ. ಅವರು ಸಮಾಜಕ್ಕೆ ಧರ್ಮ, ಸೇವೆ ಮತ್ತು ಶ್ರದ್ಧೆಯ ತತ್ವಗಳನ್ನು ಅರ್ಥಮಾಡಿಸಿದರು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಹೇಳಿದರು.

ಅವರು ಬುಧವಾರ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ಪಾಟೀಲ ಮಾತನಾಡಿ, ಶಿವಯೋಗಿ ಶ್ರೀ ಸಿದ್ಧರಾಮೇಶ್ವರರ ಅವರ ಜೀವನ ಮತ್ತು ಬೋಧನೆಗಳು ನಮಗೆ ಮಾರ್ಗದರ್ಶನವನ್ನು ನೀಡುತ್ತಿವೆ. ಅವರು ತಮ್ಮ ಜೀವನದಲ್ಲಿ ಧರ್ಮ, ಶ್ರದ್ಧೆ ಮತ್ತು ಸೇವೆಯ ಮಹತ್ವವನ್ನು ಪ್ರತಿಪಾದಿಸಿ, ಸಮುದಾಯವನ್ನು ಪ್ರೇರೇಪಿಸಿದ್ದಾರೆ ಎಂದು ಹೇಳಿದರು.

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರದ ಸಹಾಯಕ ಪ್ರಾಧ್ಯಾಪಕ ಡಾ. ರವಿ ಶೇಷಗಿರಿ ಕಾರ್ಯಕ್ರಮದಲ್ಲಿ ಶ್ರೀ ಸಿದ್ಧರಾಮೇಶ್ವರರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಹುಬ್ಬಳ್ಳಿ-ಧಾರವಾಡ ನಗರ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಮಂಜುನಾಥ ಎಲ್.ಭೋವಿ, ಪಾಲಿಕೆ ಮಾಜಿ ಸದಸ್ಯ ಬಸವರಾಜ ಹ.ಮುತ್ತಳ್ಳಿ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಮಹಾನಗರ ಪಾಲಿಕೆ ಸದಸ್ಯ ತುಳಸಪ್ಪ ಪೂಜಾರ ವಂದಿಸಿದರು.

ಸಮಾಜದ ಮುಖಂಡರಾದ ಕಾಶಪ್ಪ ನಾಗಪ್ಪ ಹಿರೇಮನಿ, ಗೋವಿಂದಪ್ಪ ಬಿ.ಬಂಡಿವಡ್ಡರ, ಮಲ್ಲೇಶಿ ಎನ್.ಮುನವಳ್ಳಿ, ಯಲ್ಲಪ್ಪ ಗೋ.ಬಂಡಿವಡ್ಡರ, ಭೀಮಪ್ಪ ಎಫ್.ನೇಮಿಕಲ್, ಮಂಜುನಾಥ ಟಿ.ಹಿರೇಮನಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಶಾಕೀರ ಸನದಿ ಮಾತನಾಡಿ, ಶಿವಯೋಗಿ ಶ್ರೀ ಸಿದ್ಧರಾಮೇಶ್ವರರ ಜೀವನವು ನಮಗೆ ನಿಷ್ಠೆ, ಧರ್ಮ ಮತ್ತು ಸೇವೆಯ ಮಹತ್ವವನ್ನು ಕಲಿಸಿದೆ. ಅವರು ತಮ್ಮ ಜ್ಞಾನ ಮತ್ತು ಸಾಧನೆಯ ಮೂಲಕ ಸಮಾಜದಲ್ಲಿ ಅಪಾರ ಬದಲಾವಣೆಗಳನ್ನು ತಂದು, ನಮಗೆ ಪ್ರೇರಣೆ ನೀಡಿದ್ದಾರೆ ಮತ್ತು ಸಿದ್ಧರಾಮೇಶ್ವರರ ಮಾರ್ಗದರ್ಶನವು ನಮಗೆ ಸಾಮಾಜಿಕ ನ್ಯಾಯ, ಪ್ರಗತಿ ಮತ್ತು ಸಹಬಾಳ್ವೆಗೆ ಉತ್ತೇಜನ ನೀಡುತ್ತದೆ ಎಂದು ಹೇಳಿದರು.

## ಬೆಳೆ ಸಮೀಕ್ಷೆ ಕೈಗೊಳ್ಳಿ

▶▶ ಮೊದಲನೇ ಪುಟದಿಂದ

ಲಕ್ಷ ತಾಕುಗಳಲ್ಲಿ ಬೆಳೆ ಸಮೀಕ್ಷ ನಡೆಸುವಂತೆ ಸರಕಾರ ಗುರಿ ನೀಡಿತ್ತು. ಈ ಪೈಕಿ 3.15 ಲಕ್ಷ ತಾಕುಗಳಲ್ಲಿ ಸಮೀಕ್ಷೆ ಮಾಡಲಾಗಿ, ಶೇ. 99.68 ಸಾಧನೆ ಮಾಡಲಾಗಿತ್ತು.

2025-26ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ 2.53 ಲಕ್ಷ ಹೆ. ಪ್ರದೇಶದಲ್ಲಿ ರೈತರು ವಿವಿಧ ಬೆಳೆಗಳನ್ನು ಬೆಳೆದಿದ್ದಾರೆ. 3.19 ಲಕ್ಷ ತಾಕುಗಳಲ್ಲಿ ಬೆಳೆ ಸಮೀಕ್ಷೆಗೆ ಗುರಿ ನಿಗದಿಪಡಿಸಲಾಗಿದ್ದು, ಜನವರಿ 31ರವರೆಗೆ ಸಮೀಕ್ಷೆ ಕೈಗೊಳ್ಳಲು ಅವಕಾಶವಿದೆ.

ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಗಳ ಮಾಹಿತಿಯನ್ನು ಆ್ಯಪ್‌ನಲ್ಲಿ ಛಾಯಾಚಿತ್ರ ಸಹಿತವಾಗಿ ಅಪ್ಲೋಡ್ ಮಾಡುವ ಉದ್ದೇಶದಿಂದ ಸಮೀಕ್ಷೆ ಆರಂಭಿಸಿದ್ದು, ರೈತರಿಗೆ ನೇರವಾಗಿ ಮಾಹಿತಿ ಅಪ್ಲೋಡ್ ಮಾಡಲು ಸಾಧ್ಯವಾಗದಿದ್ದರೆ, ಖಾಸಗಿ ನಿವಾಸಿಗಳು ಮಾಹಿತಿ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಈ ಬಗ್ಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೂಡಿಸುತ್ತಿದ್ದೇವೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ರೈತರು ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು. ಇದರಿಂದ ಸರಕಾರಕ್ಕೆ ನಿಖರವಾದ ದತ್ತಾಂಶ ಸಿಗುತ್ತದೆ. ಕೃಷಿ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಿಂದ ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಅನುಕೂಲವಾಗುತ್ತದೆ. ಜತೆಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಫಲಾನುಭವಿ ನೋಂದಣಿ, ಬೆಳೆ ವಿಮೆ ಯೋಜನೆಯಡಿ ತಾಕುವಾರಿ ಬೆಳೆ ಪರೀಶಿಲನೆ, ಬೆಳೆ ಸಾಲ ಪಡೆಯಲು ಮತ್ತು ಬೆಳೆ ಹಾನಿ ಪರಿಶೀಲನೆಗೆ ಸಹಾಯವಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

### ಐಎಎಸ್ ಅಧಿಕಾರಿ ಮಾನನಷ್ಟ ಮೊಕದ್ದಮೆ ಪ್ರಕರಣ: ಎನ್‌ಟಿವಿ ಸಂಪಾದಕ, ಇಬ್ಬರು ಪತ್ರಕರ್ತರ ಬಂಧನ

■ ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ತೆಲಂಗಾಣ ಸರ್ಕಾರದ ರಸ್ತೆ ಮತ್ತು ಕಟ್ಟಡಗಳ ಸಚಿವ ಕೋಮತಿರೆಡ್ಡಿ ವೆಂಕಟ್ ರೆಡ್ಡಿ ಹಾಗೂ ಮಹಿಳಾ ಐಎಎಸ್ ಅಧಿಕಾರಿ ಅವರ ಕುರಿತು ವಿವಾದಾತ್ಮಕ ಸುದ್ದಿ ವರದಿಗೆ ಸಂಬಂಧಿಸಿದಂತೆ, ಹೈದರಾಬಾದ್ ಕೇಂದ್ರ ಅಪರಾಧ ಠಾಣೆ (ಸಿಸಿಎಸ್) ಜನವರಿ 13 ರ ಮಂಗಳವಾರ ರಾತ್ರಿ ಎನ್‌ಟಿವಿ ಇನ್‌ಪುಟ್ ಸಂಪಾದಕ ಮತ್ತು ಹಿರಿಯ ಪತ್ರಕರ್ತ ದೊಂತು ರಮೇಶ್, ವರದಿಗಾರರಾದ ಪರಿಪೂರ್ಣಾ ಚಾರಿ ಮತ್ತು ಸುಧೀರ್ ಅವರನ್ನು ಬಂಧಿಸಿದೆ.

ತಮ್ಮ ಕುಟುಂಬದೊಂದಿಗೆ ರಜೆಗೆ ತೆರಳುತ್ತಿದ್ದ ರಮೇಶ್ ಅವರನ್ನು ವಿಮಾನ ಹತ್ತುವಾಗ ಹೈದರಾಬಾದ್ ವಿಮಾನ ನಿಲ್ದಾಣದಿಂದ ಕರೆದೊಯ್ಯಲಾಯಿತು. ವರದಿಗಳ ಪ್ರಕಾರ, ಮೂವರನ್ನು ಜನವರಿ 14 ರ ಗುರುವಾರ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸುವ ಸಾಧ್ಯತೆಯಿದೆ.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-2026ನೇ ಸಾಲಿನಲ್ಲಿ ಖಾಲಿ ಇರುವ ಸ್ಥಾನಗಳಿಗೆ ಶಿರಹಟ್ಟಿ ಪಟ್ಟಣದ ವ್ಯಾಪ್ತಿಯ ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ ಹಾಗೂ ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ವಸತಿ ನಿಲಯ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಪ್ರವೇಶ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ SSP Portal ನಲ್ಲಿ ಖಾತೆ ಸೃಜಿಸಿದ ನಂತರ https://swd.karnataka.gov.in/ ಅಥವಾ https://swdhmis.karnataka.gov.in ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಂಡು ನಂತರ ಲಾಗಿನ್ ಐಡಿ ಹಾಗೂ ಪಾಸ್ ವರ್ಡ್ ಬಳಸಿ E-kyc ಮುಖಾಂತರ ವಸತಿ ನಿಲಯಕ್ಕೆ ಅರ್ಜಿ ಸಲ್ಲಿಸುವುದು ಹಾಗೂ ಸಲ್ಲಿಸಿದ ಅರ್ಜಿಯನ್ನು ಪ್ರಿಂಟ್ ತೆಗೆದುಕೊಂಡು ಈ ಕೆಳಕಂಡ ದಾಖಲೆಗಳನ್ನು ಲಗತ್ತಿಸಿ ಸಂಬಂಧಿಸಿದ ಕಾಲೇಜಿನ ಪ್ರಾಚಾರ್ಯರಿಂದ ದೃಢೀಕರಿಸಿ ಈ ಕಾರ್ಯಾಲಯಕ್ಕೆಅರ್ಜಿ ಸಲ್ಲಿಸಲು ಈ ಮೂಲಕ ಪ್ರಕಟಿಸಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳನ್ನು ಸೀಟುಗಳ ಲಭ್ಯತೆಯನುಸಾರ ಪ್ರವೇಶ ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಶಿರಹಟ್ಟಿ ಕಾರ್ಯಾಲಯಕ್ಕೆ ಸಂಪರ್ಕಿಸಲು ಸೂಚಿಸಿದೆ. ಹಾಗೂ ದೂರವಾಣಿ ಸಂಖ್ಯೆ: 08487-295097 & 9480843132 ಇಲ್ಲಿಗೆ ಸಂಪರ್ಕಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಫೆಬ್ರವರಿ 28 ಕೊನೆಯ ದಿನವಾಗಿದೆ.

ಅರ್ಜಿಗಳೊಂದಿಗೆ ಸಲ್ಲಿಸಬೇಕಾದ ದಾಖಲೆಗಳು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಸ್ವೀಕೃತಿ ಪ್ರತಿ. (ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಸಹಿಯೊಂದಿಗೆ) , ವಿದ್ಯಾರ್ಥಿಗಳ ಜಾತಿ ಪ್ರಮಾಣ ಪತ್ರ. (ಝರಾಕ್ಸ್ ಪ್ರತಿ), ವಿದ್ಯಾರ್ಥಿಗಳ ಆಧಾರ್ ಕಾರ್ಡ್ (ಝರಾಕ್ಸ್ ಪ್ರತಿ), ಆದಾಯ ಪ್ರಮಾಣ ಪತ್ರ (ಝರಾಕ್ಸ್ ಪ್ರತಿ), ವಿದ್ಯಾರ್ಥಿ / ವಿದ್ಯಾರ್ಥಿನಿಯ ಬ್ಯಾಂಕ್ ಪಾಸ್ ಪುಸ್ತಕ (ಝರಾಕ್ಸ್ ಪ್ರತಿ) , ರೇಷನ್ ಕಾರ್ಡ್ (ಝರಾಕ್ಸ್ ಪ್ರತಿ) ವಿದ್ಯಾರ್ಥಿಗಳ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ವಿದ್ಯಾರ್ಥಿಗಳ ಹಿಂದಿನ ತರಗತಿಯ ಅಂಕಪಟ್ಟಿ ಪ್ರತಿ. (ಝರಾಕ್ಸ್ ಪ್ರತಿ), ವಿದ್ಯಾರ್ಥಿ / ವಿದ್ಯಾರ್ಥಿನಿಯ / ಪಾಲಕರ ಮೊಬೈಲ್ ನಂಬರ.

## ಇರಾನ್: ಪ್ರತಿಭಟನಾಕಾರರ ಮೇಲೆ ನಡೆದ ದಮನ ಕಾರ್ಯಾಚರಣೆಯಲ್ಲಿ ಸಾವಿನ ಸಂಖ್ಯೆ 2571ಕ್ಕೆ ಏರಿಕೆ

■ ವಿಜಯಸಾಕ್ಷಿ ಸುದ್ದಿ, ಇರಾನ್

ಇರಾನ್‌ನಲ್ಲಿ ಪ್ರತಿಭಟನೆಗಳ ಮೇಲೆ ನಡೆದ ದಮನ ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿದವರ ಸಂಖ್ಯೆ ಕನಿಷ್ಠ 2,571 ಕ್ಕೆ ಏರಿದೆ ಎಂದು ಮಾನವ ಹಕ್ಕುಗಳ ಕಾರ್ಯಕರ್ತರು ಬುಧವಾರ ತಿಳಿಸಿದ್ದಾರೆ.

ಈ ಅಂಕಿ ಅಂಶವು ಅಮೆರಿಕ ಮೂಲದ ಮಾನವ ಹಕ್ಕುಗಳ ಕಾರ್ಯಕರ್ತರ ಸುದ್ದಿ ಸಂಸ್ಥೆಯಿಂದ ಬಂದಿದೆ, ಇದು ಇತ್ತೀಚಿನ ವರ್ಷಗಳಲ್ಲಿ ಇರಾನ್‌ನಲ್ಲಿ ನಡೆದ ಅನೇಕ ಸುತ್ತಿನ ಅಶಾಂತಿಯಲ್ಲಿ ನಿಖರವಾಗಿ ವರದಿಯಾಗಿದೆ.

ಸತ್ತವರಲ್ಲಿ 2,403 ಜನರು ಪ್ರತಿಭಟನಾಕಾರರು ಮತ್ತು 147 ಜನರು ಸರ್ಕಾರಕ್ಕೆ ಸಂಬಂಧಿಸಿದವರು ಎಂದು ಕಾರ್ಯಕರ್ತರ ಗುಂಪು ಹೇಳಿದೆ.

ಪ್ರತಿಭಟನೆ ದಮನ ಕಾರ್ಯಾಚರಣೆಯಲ್ಲಿ ಹನ್ನೆರಡು ಮಕ್ಕಳು ಸಾವನ್ನಪ್ಪಿದ್ದಾರೆ ಮತ್ತು ಒಂಬತ್ತು ನಾಗರಿಕರು ಪ್ರತಿಭಟನೆಗಳಲ್ಲಿ ಭಾಗವಹಿಸುತ್ತಿರಲಿಲ್ಲ ಎಂದು ಅದು ಹೇಳಿದೆ. 18,100 ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ ಎಂದು ಗುಂಪು ತಿಳಿಸಿದೆ.

ಇರಾನ್‌ನಲ್ಲಿ ಇಂಟರ್ನೆಟ್ ಸಂಪರ್ಕ ಕಡಿತಗೊಂಡಿರುವುದರಿಂದ, ವಿದೇಶಗಳಿಂದ ಬಂದಿರುವ ವಿಚಾರಗಳಲ್ಲಿ ತಿಳಿಯುವುದು ಹೆಚ್ಚು ಕಷ್ಟಕರವಾಗಿದೆ. ಅಸೋಸಿಯೇಟೆಡ್ ಪ್ರೆಸ್ ಸ್ವತಂತ್ರವಾಗಿ ಸಾವಿನ ಸಂಖ್ಯೆಯನ್ನು ನಿರ್ಣಯಿಸಲು ಸಾಧ್ಯವಾಗುತ್ತಿಲ್ಲ.

### ತ್ರಿವಿಧ ದಾಸೋಹದ ಮೂಲಕ ಲೋಕ ಕಲ್ಯಾಣಕ್ಕಾಗಿ ಸಮರ್ಪಿಸಿಕೊಂಡಿರುವ ಹೂವಿನಶಿಗ್ಲಿ ವಿರಕ್ತಮಠ

# ಹೂವಿನ ಶಿಗ್ಲಿ ಮಠದಲ್ಲಿ ಸಂಕ್ರಾಂತಿ ಸಂಭ್ರಮ



ಜ. 13ರಿಂದ 3 ದಿನಗಳ ಕಾಲ ಹೂವಿನ ಶಿಗ್ಲಿಯ ವಿರಕ್ತಮಠದ 47ನೇ ಜಾತ್ರಾ ಮಹೋತ್ಸವ, ಲಿಂ. ನಿರಂಜನ ಮಹಾಸ್ವಾಮಿಗಳವರ 16ನೇ ಪುಣ್ಯ ಸ್ಮರಣೋತ್ಸವ ನಿಮಿತ್ತ ಪುರಾಣ ಪ್ರವಚನ, ಲಿಂಗದೀಕ್ಷೆ, ಸಾಮೂಹಿಕ ವಿವಾಹ, ತುಲಾಭಾರ ಸೇವೆ, ಧರ್ಮಸಭೆ, ಮಹಾತ್ಮರ ಬದುಕು-ಬೆಳಕು ಚಿಂತನಗೋಷ್ಠಿ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ವ್ಯವಹಾರಿಕ ಯುಗದಲ್ಲಿ ಕಮರ್ಷಿಯಲ್ ಆಗದೇ, ಸೇವೆಯಾಗಿಯೇ ಮುಂದುವರೆದದ್ದು ಶ್ರೀ ನಿರಂಜನ ಸ್ವಾಮೀಜಿ (ಬಾಬಾನಂದರು) ಹಾಗೂ ಈಗಿನ ಮಠಾಧೀಶರಾದ ಶ್ರೀ ಚನ್ನವೀರ ಸ್ವಾಮೀಜಿ ಅವರಿಗೆ ಸಲ್ಲುವ ಶ್ರೇಯಸ್ಸಾಗಿದೆ. ಈ ಗುರುಕುಲದಲ್ಲಿ ಬಡ, ಅನಾಥರು ಸೇರಿ 400ಕ್ಕೂ ಹೆಚ್ಚು ಮಕ್ಕಳು ಓದುತ್ತಿದ್ದು ಅವರಿಗೆ ಶಿಕ್ಷಣದ ಜತೆಗೆ ಧರ್ಮ, ಸಂಸ್ಕೃತಿ, ಸಂಸ್ಕಾರ ಮತ್ತು ವೇದಾಧ್ಯಯನ ನೀಡಿ ಲಿಂ.ಶ್ರೀಗಳ ಮಾರ್ಗದಲ್ಲಿ ಮಠವನ್ನು ವಿಶಿಷ್ಟ ಜಾಗೃತ ಕೇಂದ್ರವನ್ನಾಗಿಸುವತ್ತ ಸಾಗಿದ್ದಾರೆ.



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಾಡಿನ ಐತಿಹಾಸಿಕ ಪರಂಪರೆಯಲ್ಲಿ ಸಾಧುಗಳು, ಸಂತರು, ಶರಣರು, ಋಷಿಮುನಿಗಳು, ಮಠಾಧೀಶರು ತಮ್ಮ ತಪಃಶಕ್ತಿ, ಸಂಕಲ್ಪ, ಜ್ಞಾನ, ಅನುಭಾವಗಳಿಂದ ಸಮಾಜಸೇವೆ, ತ್ರಿವಿಧ ದಾಸೋಹದ ಮೂಲಕ ಲೋಕ ಕಲ್ಯಾಣಕ್ಕಾಗಿ ಸಮರ್ಪಿಸಿಕೊಂಡಿದ್ದಾರೆ. ಇದಕ್ಕೆ ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿ ವಿರಕ್ತಮಠ ಸಾಕ್ಷಿಯಾಗಿದೆ.

ಲಿಂ. ನಿರಂಜನ ಮಹಾಸ್ವಾಮಿಗಳು ಬಸವನಾಡು ಬೀದರ ಜಿಲ್ಲೆ ಔರಾದ್ ತಾಲೂಕಿನ ಸೋನಾಳ ಗ್ರಾಮದಿಂದ 1996ರಲ್ಲಿ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಆಗಮಿಸಿದ್ದರು. ಈ ವೇಳೆ ಅವರಿಗೆ ಸ್ವಪ್ನವೊಂದು ಬಿದ್ದು, ಹೂವಿನ ಶಿಗ್ಲಿಯಲ್ಲಿನ ಪಾಳು ಬಿದ್ದಿರುವ ಮಠವನ್ನು ಉದ್ಧರಿಸು ಎಂಬ ವಾಣಿಯನ್ವಯ ಕಲ್ಲು-ಮುಳ್ಳುಗಳಿಂದ ಕೂಡಿದ, ಶಿಥಿಲಾವಸ್ಥೆಯ ಚಿಕ್ಕ ಗುಡಿಯಲ್ಲಿ ನೆಲೆನಿಂತ ಶ್ರೀಗಳು ತಮ್ಮ ಸಂಕಲ್ಪ ಶಕ್ತಿಯಿಂದ ಈ ಸ್ಥಳವನ್ನು ಜೀರ್ಣೋದ್ಧಾರಗೊಳಿಸಿದರು. ಆಯುರ್ವೇದ ಔಷಧಿ ಸಿದ್ಧಪಡಿಸಿ ಮಾರಕ ರೋಗಗಳಿಗೆ ದಿವ್ಯೌಷಧಿ ನೀಡಿ ರೋಗಿಗಳ ಪಾಲಿಗೆ ಸಂಜೀವಿನಿಯಾಗಿದ್ದರು.

ತುಮಕೂರಿನ ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮಿಗಳ ನೆಚ್ಚಿನ ಶಿಷ್ಯರಾಗಿದ್ದ ಲಿಂ. ನಿರಂಜನ ಶ್ರೀಗಳು ಅವರಂತೆಯೇ ಗ್ರಾಮೀಣ ಪ್ರದೇಶಗಳ ಬಡ, ಅನಾಥ ಮಕ್ಕಳಿಗೆ ತ್ರಿವಿಧ ದಾಸೋಹ ಸೇವೆಯ ಮೂಲಕ ಗುರುಕುಲ ಶಿಕ್ಷಣ ಆರಂಭಿಸಿ ಬಡ ಮಕ್ಕಳ ಆಶಾಕಿರಣವೇ ಆಗಿದ್ದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಪ್ರತಿವರ್ಷ ಸಂಕ್ರಾಂತಿಗೆ ನಾಡಿನ ಹರಗುರುಚರ ಮೂರ್ತಿಗಳ ಸಮ್ಮುಖದಲ್ಲಿ ಕ್ಷೇತ್ರದಲ್ಲಿ ಜಾತ್ರಾಮಹೋತ್ಸವದ ನಿಮಿತ್ತ ವಿವಿಧ ಸಾಮಾಜಿಕ, ಧಾರ್ಮಿಕ, ಸಾಂಪ್ರದಾಯಿಕ ಹಬ್ಬಗಳನ್ನು ಆಚರಿಸುತ್ತಿದ್ದರು.

ನಿರಂಜನ ಮಹಾಸ್ವಾಮಿಗಳು 2011ರಲ್ಲಿ ಲಿಂಗೈಕ್ಯರಾದ ಬಳಿಕ ಶ್ರೀಮಠದ ಸಂಪೂರ್ಣ ಜವಾಬ್ದಾರಿ ಹೊತ್ತ ಹಾವೇರಿ ತಾಲೂಕಿನ ಮರೋಳ ಗ್ರಾಮದ ಚನ್ನವೀರ ಶ್ರೀಗಳು ಶ್ರೀಮಠ ಮತ್ತು ಗುರುಕುಲವನ್ನು ಅತ್ಯಂತ ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಶ್ರೀಗುರು ನಿರಂಜನ ಪೂರ್ವ ಪ್ರಾಥಮಿಕ ಕನ್ನಡ ಶಾಲೆ, ಶ್ರೀ ಗುರುಕುಲ ವಸತಿ ಪ್ರಾಥಮಿಕ ಶಾಲೆ, ಶ್ರೀ ಗುರುಕುಲ ವಸತಿ ಪ್ರೌಢಶಾಲೆ ಆರಂಭಿಸಿ, ಬಡ ಹಾಗೂ ನಿರ್ಗತಿಕ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲಾಗುತ್ತಿದೆ.

ಸರ್ಕಾರದ ಅನುದಾನವಿಲ್ಲದೇ ನಿತ್ಯ ನೂರಾರು ವಿದ್ಯಾರ್ಥಿಗಳಿಗೆ ಅನ್ನದಾಸೋಹದ ಜೊತೆಗೆ ಶಿಕ್ಷಣ ದಾಸೋಹ ಸಾಂಗವಾಗಿ ಸಾಗುವಲ್ಲಿ ಶ್ರೀಗಳ ಆಣತಿಯಂತೆ ನಡೆದು ಸಹಾಯ-ಸಹಕಾರ ನೀಡುತ್ತಾ ಬಂದಿರುವ ಗ್ರಾಮಸ್ಥರ ಮತ್ತು ಭಕ್ತರ ಸೇವಾ ಕಾರ್ಯವೂ ಅಷ್ಟೇ ಪ್ರಸಂಶನೀಯ.

ಪ್ರತಿವರ್ಷದಂತೆ ಈ ವರ್ಷವೂ ಜ.13ರಿಂದ 15ರವರೆಗೆ ನಾಡಿನ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ಅನ್ನದಾಸೋಹ, ಜ್ಞಾನ ದಾಸೋಹದ ಜಾತ್ರಾ ಮಹೋತ್ಸವ ಮತ್ತು ಲಿಂ.ಶ್ರೀಗಳ ಪುಣ್ಯಸ್ಮರಣೋತ್ಸವ ಆಚರಿಸಲಾಗುತ್ತದೆ.

ಖಡಕ್ ರೊಟ್ಟಿ ಮತ್ತು ಕರಿಂಡಿ ಪ್ರಸಾದವೇ ಈ ಜಾತ್ರೆಯ ವೈಶಿಷ್ಟ್ಯವಾಗಿದೆ. ಜಾತ್ರೆಗೆ ಹೂವಿನ ಶಿಗ್ಲಿ ಸೇರಿ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಶ್ರೀಮಠಕ್ಕೆ ರೊಟ್ಟಿ ಸೇರಿ ಇತರೇ ಆಹಾರ ಧಾನ್ಯಗಳನ್ನು ಸಮರ್ಪಿಸುತ್ತಾರೆ.

## ಪ್ರಚಾರ ವಾಹನಕ್ಕೆ ಚಾಲನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಗದಗ ಜಿಲ್ಲೆಯಾದ್ಯಂತ ಬಾಲ ಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಸಂದೇಶ ಸಾರುವ ಅಟೋ ಪ್ರಚಾರಕ್ಕೆ ಸೋಮವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಬಾಲಕಾರ್ಮಿಕ ಕಿಶೋರ ಕಾರ್ಮಿಕ ಪದ್ಧತಿ ವಿರೋಧಿ ಸಂದೇಶ ಸಾರುವ ಕರಪತ್ರ, ಪೋಸ್ಟರ್ಸ್ ಹಾಗೂ ಸ್ಟಿಕರ್ಸ್‌ಗಳನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಗದಗ ಕಾರ್ಮಿಕ ನಿರೀಕ್ಷಕರಾದ ಸುಷ್ಮಾ, ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಸಂದೇಶ ಪಾಟೀಲ ಸೇರಿದಂತೆ ಕಾರ್ಮಿಕ ಇಲಾಖೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಬಿಜೆಪಿ ಗದಗ ಜಿಲ್ಲಾ ಸಂಘಟನಾ ಸಭೆ



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬಿಜೆಪಿ ರಾಜ್ಯ ಕಚೇರಿ ಜಗನ್ನಾಥ ಭವನದಲ್ಲಿ ರಾಜ್ಯ ಅಧ್ಯಕ್ಷರಾದ ವಿಜಯೇಂದ್ರ ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ, ರಾಜ್ಯ ಬಿಜೆಪಿ ಕೋರ್ ಕಮಿಟಿ ಸದಸ್ಯರ ಸಮ್ಮುಖದಲ್ಲಿ ಗದಗ ಜಿಲ್ಲಾ ಸಂಘಟನಾ ಸಭೆ ಜರುಗಿತು.

ಮಾಜಿ ಮುಖ್ಯಮಂತ್ರಿಗಳು, ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿಗಳು, ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಜಗದೀಶ ಶೆಟ್ಟರ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ, ಜಿಲ್ಲಾಧ್ಯಕ್ಷರಾದ ರಾಜು ಕುರಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ್, ಪಕ್ಕೀರೇಶ ರಟ್ಟೀಹಳ್ಳಿ, ಮಂಡಲ ಅಧ್ಯಕ್ಷರಾದ ಸುನೀಲ್ ಮಹಾಂತಶೆಟ್ಟರ್, ಅಂದಪ್ಪ ಹಾರೂಗೇರಿ, ಉಮೇಶ ಮಲ್ಲಾಪೂರ, ಬೂದಪ್ಪ ಹಳ್ಳಿ, ಸುರೇಶ ಮರಳಪ್ಪನವರ ಭಾಗವಹಿಸಿದ್ದರು.

### ಶಾಲಾ ಮಕ್ಕಳ ಅಪಹರಣ ಪ್ರಕರಣ; ಸಮಿತಿ ವರದಿ ಪರಶೀಲಿಸಿ, ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ

## ಪ್ರಕರಣದ ತನಿಖೆಗೆ ಸಮಿತಿ ನೇಮಕ



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜನವರಿ 12ರಂದು ಜರುಗಿದ ಕಮಲಾಪುರ ಸರಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳ ಅಪಹರಣ ಪ್ರಕರಣದ ಆರೋಪಿ ವಿರುದ್ಧ ಎಫ್‌ಐಆರ್ ದಾಖಲಿಸಿ, ಕ್ರಮ ಜರುಗಿಸಲಾಗಿದೆ. ಶಾಲಾ ಅವಧಿಯಲ್ಲಿ ಮಕ್ಕಳ ಅಪಹರಣ ಆಗಿರುವದರಿಂದ ಈ ಕುರಿತು ತನಿಖೆ ಮಾಡಿ ವರದಿ ನೀಡಲು, ಜಿಲ್ಲಾ ಪಂಚಾಯತ ಸಿಇಓ ಅವರು ಅಧಿಕಾರಿಗಳ ಸಮಿತಿ ರಚಿಸಿದ್ದಾರೆ. ಸಮಿತಿ ನೀಡುವ ವರದಿ ಪರಿಶೀಲಿಸಿ, ಲೋಪ ಉಂಟಾಗಿದ್ದಲ್ಲಿ ಸಂಬಂಧಿಸಿದವರ ಮೇಲೆ ನಿಯಮಾನುಸಾರ ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಅಪಹರಣದಿಂದ ಸುರಕ್ಷಿತವಾಗಿ ಪಾರಾಗಿ, ಜಿಲ್ಲಾ ಆಸ್ಪತ್ರೆಯ ಸಖಿ ವಾರ್ಡ್‌ದಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಕ್ಕಳ ಆರೋಗ್ಯ ವಿಚಾರಿಸಿ, ಸಾಂತ್ವನ ಹೇಳಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಶಾಲಾ ಆವರಣದಲ್ಲಿ ಸುರಕ್ಷತೆ ಹೆಚ್ಚಿಸುವುದು, ವಿದ್ಯಾರ್ಥಿಗಳ ಸುರಕ್ಷತೆಗಾಗಿ ಸೂಕ್ತ ನಿಯಮಗಳನ್ನು ಜಾರಿ ಮಾಡುವುದು ಸೇರಿದಂತೆ ವಿವಿಧ ರೀತಿಯ ಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ನಿಯಮಾಳಿಗಳನ್ನು ಪರಿಶೀಲಿಸಿ, ಸೂಕ್ತ ಕ್ರಿಯಾಯೋಜನೆಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಲು ಜಿಲ್ಲಾ ಪಂಚಾಯತಿ ಸಿಇಓ ಅವರಿಗೆ ನಿರ್ದೇಶಿಸಿರುವದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಮಕಳ ಭೇಟಿ ಸಮಯದಲ್ಲಿ, ಮಕ್ಕಳಿಂದಲೇ ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡರು. ಮಕ್ಕಳ ಪಾಲಕರ ಅಭಿಪ್ರಾಯ ಸಂಗ್ರಹಿಸಿದರು. ಅಧಿಕಾರಿಗಳಿಂದ ಘಟನೆಯ ಕುರಿತು ಮಾಹಿತಿ ಸಂಗ್ರಹಿಸಿ, ಮುಂಜಾಗ್ರತೆ ವಹಿಸುವಂತೆ ಎಚ್ಚರಿಕೆ ನೀಡಿದರು.

ಪೊಲೀಸ್ ಅಧಿಕಾರಿಗಳೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು, ಪ್ರಕರಣದ ಆರೋಪಿಗೆ ಕಾನೂನು ಪ್ರಕಾರ ಕ್ರಮ ಆಗಬೇಕು. ಪ್ರಕರಣದ ಕುರಿತು ಸಮಗ್ರ ತನಿಖೆ ಮಾಡಿ, ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಬೇಕು. ಜಿಲ್ಲಾಡಳಿತವು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಸದರಿ ಪ್ರಕರಣದಲ್ಲಿ ವಿಶೇಷ ಅಭಿಯೋಜಕರ ಅವಶ್ಯಕತೆ ಇದ್ದಲ್ಲಿ ಪೊಲೀಸ್ ಇಲಾಖೆ ಪರಿಶೀಲಿಸಿ, ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಬೇಕು. ಪ್ರಕರಣದ ಆರೋಪಿಯು ಈ ಹಿಂದೆಯೂ ಇಂತಹ ಪ್ರಕರಣದಲ್ಲಿ ಭಾಗಿಯಾಗಿರುವ ಬಗ್ಗೆ ಪೊಲೀಸ್ ಮಾಹಿತಿ ಇದ್ದು, ಈ ಹಿನ್ನೆಲೆಯಲ್ಲಿ ಸಮಗ್ರ ತನಿಖೆ ಮಾಡಿ, ಕಾನೂನು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಪ್ರಕರಣದ ತನಿಖೆಗೆ ಕ್ರಮ ಕೈಗೊಳ್ಳಲಾಗಿದೆ. ವರದಿ ಪರಿಶೀಲಿಸಿ, ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಶಾಲಾ ಅವಧಿಯಲ್ಲಿ ಕಡ್ಡಾಯವಾಗಿ, ಶಿಕ್ಷಕರು ಶಾಲೆಯಲ್ಲಿ ಇದ್ದು, ಮಕ್ಕಳಿಗೆ ಪಾಠ ಬೋಧನೆ ಮಾಡಬೇಕು ಮತ್ತು ಮಕ್ಕಳ ಸುರಕ್ಷತೆ ಬಗ್ಗೆ ನಿಗಾವಹಿಸಬೇಕು. ಈ ಕುರಿತು ಪರಿಶೀಲಿಸಿ, ಕ್ರಮವಹಿಸಲು ಈಗಾಗಲೇ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಡಾ. ಎಚ್.ಎಚ್. ಕುಕನೂರ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್. ಎಮ್. ಹೊನಕೇರಿ, ಪೊಲೀಸ್ ಇನಸ್ಪೆಕ್ಟರ್ ಪ್ರಭು ಗಂಗೆನಹಳ್ಳಿ ಸೇರಿದಂತೆ ಇತರರು ಇದ್ದರು.

## ಕಾಂಗ್ರೆಸ್ ಮುಖಂಡನ ಗೂಂಡಾವರ್ತನೆ : ಫ್ಲೆಕ್ಸ್ ತೆರವುಗೊಳಿಸಿದ್ದಕ್ಕೆ ಪೌರಾಯುಕ್ತೆಗೆ ಧಮ್ಕಿ, ಅವಾಚ್ಯ ಶಬ್ದಗಳಿಂದ ನಿಂದನೆ

■ **ವಿಜಯಸಾಕ್ಷಿ ಸುದ್ದಿ, ದೊಡ್ಡಬಳ್ಳಾಪುರ**

ಸಚಿವ ಝಮೀರ್ ಅಹ್ಮದ್ ಅವರ ಮಗ ಝೈದ್ ಖಾನ್ ನಟನೆಯ 'ಕಲ್ಟ್' ಸಿನಿಮಾದ ಫ್ಲೆಕ್ಸ್‌ಗಳನ್ನು ತೆರವುಗೊಳಿಸಿದ ವಿಚಾರವಾಗಿ ಕೆಪಿಸಿಸಿ ಸಂಯೋಜಕ ರಾಜೀವ್ ಗೌಡ, ಶಿಡ್ಲಘಟ್ಟ ನಗರಸಭೆ ಪೌರಾಯುಕ್ತೆ ಜಿ. ಅಮೃತಗೌಡ ಅವರೊಂದಿಗೆ ಗೂಂಡಾವರ್ತನೆ ಮಾಡಿ ಧಮ್ಕಿ ಹಾಕಿರುವ ಘಟನೆ ನಡೆದಿದೆ.

ರಾಜೀವ್ ಗೌಡ ಅವರು ಅಧಿಕಾರಿ ಅಮೃತಗೌಡ ಅವರಿಗೆ ಕರೆ ಮಾಡಿ ಅವಾಚ್ಯವಾಗಿ ನಿಂದಿಸಿರುವ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಮಂಗಳವಾರ ಸಂಜೆ ಶಿಡ್ಲಘಟ್ಟದ ನೆಹರೂ ಮೈದಾನದಲ್ಲಿ 'ಕಲ್ಟ್' ಸಿನಿಮಾದ ಪ್ರಚಾರ ಸಭೆ ಆಯೋಜಿಸಲಾಗಿತ್ತು. ಈ ಹಿನ್ನೆಲೆ ಕೋಟೆ ವೃತ್ತದಲ್ಲಿ ರಸ್ತೆಗೆ ಅಡ್ಡವಾಗಿ ಸಿನಿಮಾ ಪ್ರಚಾರದ ಫ್ಲೆಕ್ಸ್‌ಗಳನ್ನು ಅಳವಡಿಸಲಾಗಿತ್ತು. ಇದರಿಂದ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆ ನಗರಸಭೆ ಸಿಬ್ಬಂದಿ ಫ್ಲೆಕ್‌ಗಳನ್ನು ಕಚೇರಿಗೆ ತಂದಿಟ್ಟಿದ್ದರು. ಈ ಬಗ್ಗೆ ನಗರಸಭೆ ಮಾಜಿ ಅಧ್ಯಕ್ಷ ಹಾಗೂ ರಾಜೀವ್ ಗೌಡ ಬೆಂಬಲಿಗ ಅಪ್ಸರ್‌ಗೆ ಪೌರಾಯುಕ್ತರು ಮಾಹಿತಿ ಕೂಡ ನೀಡಿದ್ದರು ಎಂದು ವರದಿಯಾಗಿದೆ.

ಫ್ಲೆಕ್ಸ್ ಬಿಚ್ಚಿದ್ದಕ್ಕೆ ತೀವ್ರ ಆಕ್ರೋಶಗೊಂಡ ರಾಜೀವ್‌ಗೌಡ ಪೌರಾಯುಕ್ತೆಗೆ ಕರೆಮಾಡಿ ಅವಾಚ್ಯವಾಗಿ ಬೈದಿದ್ದಾರೆ. ಗೂಂಡಾವರ್ತನೆ ಮಾಡಿ ಧಮ್ಕಿ ಹಾಕಿದ್ದಾರೆ ಎಂದು ವರದಿಗಳು ವಿವರಿಸಿವೆ. "ಬ್ಯಾನರ್ ಬಿಚ್ಚಿಸಿದರೆ ಬೆಂಕಿ ಹಚ್ಚಿಸುವೆ. ನನ್ನ ಒಳ್ಳೆಯತನ ನೋಡಿದ್ದೀರಿ ಕೆಟ್ಟತನ ನೋಡಿಲ್ಲ" ಎಂದು ರಾಜೀವ್‌ಗೌಡ ಪೌರಾಯುಕ್ತೆಗೆ ಧಮ್ಕಿ ಹಾಕಿರುವುದು ವೈರಲ್ ಆಡಿಯೋದಲ್ಲಿದೆ.

## ಐತಿಹಾಸಿಕ ಕ್ಯಾಂಪಸ್ ಸಂದರ್ಶನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಇತಿಹಾಸದಲ್ಲಿಯೇ ಮೊದಲ ಬಾರಿಗೆ, ಆರ್‌ಎಂಎಸ್‌ಎಸ್ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ನರ್ಸಿಂಗ್ ಅಧಿಕಾರಿ ಹುದ್ದೆಗೆ ಕ್ಯಾಂಪಸ್ ಸಂದರ್ಶನವನ್ನು ಆಯೋಜಿಸಿದ್ದು, ಈ ಮಹತ್ವದ ಕಾರ್ಯಕ್ರಮವನ್ನು ಹುಬ್ಬಳ್ಳಿಯ ವಿಹಾನ್ ಹಾರ್ಟ್ ಕೇರ್ ಮತ್ತು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಡೆಸಿತು.



ಸಂದರ್ಶನದಲ್ಲಿ ಭಾಗವಹಿಸಿದ 16 ವಿದ್ಯಾರ್ಥಿಗಳಲ್ಲಿ, 14 ವಿದ್ಯಾರ್ಥಿಗಳನ್ನು ನರ್ಸಿಂಗ್ ಅಧಿಕಾರಿಯ ಪ್ರತಿಷ್ಠಿತ ಪಾತ್ರಕ್ಕೆ ಯಶಸ್ವಿಯಾಗಿ ಆಯ್ಕೆ ಮಾಡಲಾಯಿತು. ಈ ಗಮನಾರ್ಹ ಸಾಧನೆಯು ಸಂಸ್ಥೆಯಲ್ಲಿ ನೀಡಲಾಗುವ ನರ್ಸಿಂಗ್ ಶಿಕ್ಷಣ ಮತ್ತು ತರಬೇತಿಯ ಉನ್ನತ ಮಟ್ಟವನ್ನು ಪ್ರತಿಬಿಂಬಿಸುತ್ತದೆ.

ವಿದ್ಯಾರ್ಥಿಗಳ ಅತ್ಯುತ್ತಮ ಕಾರ್ಯಕ್ಷಮತೆಗೆ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ ಮತ್ತು ಕಾರ್ಯದರ್ಶಿ ಡಾ. ವೇಮನ ಸಾವಕಾರ ಮೆಚ್ಚುಗೆ ವ್ಯಕ್ತಪಡಿಸಿದರು. ಹುಬ್ಬಳ್ಳಿಯ ವಿಹಾನ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ್ ಪಾಟೀಲ್ ಮತ್ತು ಅವರ ತಂಡದ ಸದಸ್ಯರು ಸಂದರ್ಶನ ನಡೆಸಿದರು.

ಡಾ. ಪಾಟೀಲ್ ಮತ್ತು ಅವರ ತಂಡವು ವೃತ್ತಿಪರ ವಿಧಾನವನ್ನು ಪ್ರದರ್ಶಿಸಿತು, ಸಂಪೂರ್ಣ ಮೌಲ್ಯಮಾಪನ ಪ್ರಕ್ರಿಯೆಯನ್ನು ಖಚಿತಪಡಿಸಿತು.

ಪ್ರಿನ್ಸಿಪಾಲ್ ಡಾ. ಬಸಯ್ಯ ವಿ.ಎಚ್ ಮತ್ತು ಆರ್‌ಎಂಎಸ್‌ಎಸ್‌ನ ಎಸಿ ಸದಸ್ಯ ಸ್ಟೀಫನ್ ಜಾನ್ ವಿದ್ಯಾರ್ಥಿಗಳ ಕಾರ್ಯಕ್ಷಮತೆಯನ್ನು ಶ್ಲಾಘಿಸಿದರು.

## ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ(ಮುನ್ಸಿಪಾಲಿಟಿ) ಯೋಜನೆ ಹಂತ 04ರ ಯೋಜನೆ ಅಡಿಯಲ್ಲಿ ಶಿರಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕಚ್ಚಾ ಮನೆ ಅಥವಾ ಖಾಲಿ ನಿವೇಶನ ಹೊಂದಿದ ಬಡತನ ರೇಖೆಗಿಂತ ಕೆಳಗಿರುವ ಪರಿಶಿಷ್ಟ ಪಂಗಡ ಮಹಿಳಾ ಫಲಾನುಭವಿಗಳಿಗೆ ಪಕ್ಕಾ ಮನೆ ನಿರ್ಮಾಣ ಮಾಡಲು ಅರ್ಜಿ ಅಹ್ವಾನಿಸಲಾಗಿದೆ. ಪಟ್ಟಣ ಪಂಚಾಯತ್ ಕಚೇರಿಯಲ್ಲಿ ಅರ್ಜಿ ನಮೂನೆ ಪಡೆದು ಎಲ್ಲಾ ದಾಖಲೆಗಳೊಂದಿಗೆ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್ ಶಿರಹಟ್ಟಿ ಇವರಿಗೆ ನೀಡಬೇಕು. ಅರ್ಜಿ ಸಲ್ಲಿಸಲು ಜನವರಿ 19 ಕೊನೆಯ ದಿನವಾಗಿದೆ. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ. ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು: ಮತದಾರರ ಗುರುತಿನ ಚೀಟಿ, ಬಿಪಿಎಲ್ ರೇಶನ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಆಧಾರ್ ಕಾರ್ಡ್, ಜಾತಿ/ ಆದಾಯ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಕಂಪ್ಯೂಟರ್ ಉತಾರ, 4 ಪಾಸ್ ಪೋರ್ಟ ಸೈಜ್ ಫೋಟೋ

ಕರ್ನಾಟಕ ಸರ್ಕಾರ (ರಾಷ್ಟ್ರೀಯ ಆರೋಗ್ಯ ಅಭಿಯಾನ)
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಗದಗ.**
**ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ**
ಇಮೇಲ್: rchogadag@gmail.com
ಕ್ರ.ಸಂ:ಜಿಆಕುಕಸೋಗ/NHM/FT4.TSH.B-12Test-ಮ.ಅ.ಟೆಂ.ಪ್ರ/371/2025-26 ದಿನಾಂಕ: 14.01.2026

**ಟೆಂಡರ್ ಪ್ರಕಟಣೆ**

**2025-26ನೇ** ಸಾಲಿಗೆ 15ನೇ ಹಣಕಾಸು ಆಯೋಗದಡಿಯಲ್ಲಿನ ಗದಗ ಜಿಲ್ಲೆಯಲ್ಲಿನ ಗರ್ಭಿಣಿಯರಿಗೆ FT4,TSH & Vitamin-B-12 test ಗಳನ್ನು ನಡೆಸಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮರು ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿದೆ. ಮರು ಅಲ್ಪಾವಧಿ ಟೆಂಡರ್ ಅಂದಾಜು ಮೊತ್ತ **ರೂ. 24.29** ಲಕ್ಷಗಳು ಹಾಗೂ ಇ.ಎಮ್.ಡಿ ಮೊತ್ತ **ರೂ. 48,580**/- ಇದ್ದು. ಮರು ಅಲ್ಪಾವಧಿ ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ : **14.01.2026** ಮತ್ತು ಕೊನೆಯ ದಿನಾಂಕ : **21.01.2026**ರ ಸಂಜೆ 05-00 ಗಂಟೆವರೆಗೆ.

ಹೆಚ್ಚಿನ ಮಾಹಿತಿಗಾಗಿ ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ ಮೂಲಕ Tender Reference No-DHFWS/2025-26/SE1701/CALL-2 ಸಂಖ್ಯೆಯುನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ ಅಥವಾ dhogadag@gmail.com/ rchogadag@gmail.com ಸಂಪರ್ಕಿಸಬಹುದಾಗಿದೆ.

**ಸಹಿ/- ಉಪಾಧ್ಯಕ್ಷರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/534/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka